ಮಂಗಳವಾರ 04.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 90
Digital Varthe Kannada Daily
Volume 01 - Issue 90
Tuesday 04.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ವಿದ್ಯುತ್ ತಂತಿ ಸ್ಪರ್ಶಿಸಿ ಜೋಡಾನೆ ಸಾವು



ಬೆಳಗಾವಿ: ಇಲ್ಲಿನ ಸುಲೇಗಾಳಿ ಮೀಸಲು ಅರಣ್ಯ ಪ್ರದೇಶದಲ್ಲಿ ವಿದ್ಯುತ್ ತಂತಿ ಸ್ಪರ್ಶಿಸಿ ಜೊಡಾನೆಗಳು ಸಾವನ್ನಪ್ಪಿದ ಘಟನೆ ನಡೆದಿದೆ. ಖಾನಾಪುರ ತಾಲೂಕಿನ ಕಡೆಯ ಹಳ್ಳಿಯ ಸುಲೇಗಾಳಿ ಸುರಕ್ಷಿತ ಅರಣ್ಯ ಪ್ರದೇಶದಲ್ಲಿ ಆನೆಗಳ ಹಿಂಡಿನಿಂದ ಬಂದ ಸರಿಸುಮಾರು ನಾಲ್ಕು ವರ್ಷಗಳ ವಯಸ್ಸಿನ ಒಂದು ಗಂಡು, ಒಂದು ಹೆಣ್ಣು ಆನೆ ಮೃತಪಟ್ಟಿವೆ.

ಘಟನೆ ತಿಳಿಯುತ್ತಿದ್ದಂತೆ ನಾಗರಗಾಳಿ ವಲಯದ ಆರ್‌ಎಫ್‌ಓ ಸಚೀನ ಹೊನಮನಿ, ಡಿಎಫ್‌ಓ ಕ್ರಾಂತಿ ಅಧಿಕಾರಿಗಳ ತಂಡದಿಂದ ಸ್ಥಳ ಪರಿಶೀಲನೆ ನಡೆಸಲಾಗಿದೆ. ಮೃಗಾಲಯ ವೈದ್ಯ ನಾಗೇಶ ಹುಯಿಲಗೋಳ ಮರಣೋತ್ತರ ಪರಿಕ್ಷೆ ನಡೆಸಿದ್ದಾರೆ. ಈ ಕುರಿತು ಡಿಎಫ್‌ಓ (DFO) ಕ್ರಾಂತಿ, ಬೆಳಗಾವಿ ಜಿಲ್ಲೆ ಖಾನಾಪುರ ತಾಲೂಕಿನ ನಾಗರಗಾಳಿ ಸುರಕ್ಷಿತ ಅರಣ್ಯಪ್ರದೇಶದ ಸುಲೇಗಾಳಿ ಗ್ರಾಮದ ಹೊರವಲಯದಲ್ಲಿ ವಿದ್ಯುತ್ ತಂತಿ ಸ್ಪರ್ಶಿಸಿ ಜೋಡಾನೆಗಳಿ ಪ್ರಾಣ ಕಳದುಕೊಂಡಿವೆ.

ರೈತ ಗಣಪತಿ ಗುರವ ಅವರ ತೋಟದಲ್ಲಿ ಹಾಕಿದ ವಿದ್ಯುತ್ ತಂತಿ ಬೇಲಿ ಸ್ಪರ್ಶಿಸಿದ ಆನೆಗಳು ಸ್ಥಳದಲ್ಲಿಯೇ ಮೃತಪಟ್ಟಿವೆ ಎಂದು ತಿಳಿಸಿದ್ದಾರೆ. ಆನೆಗಳ ಸಾವಿನ ವಿಷಯ ತಿಳಿಯುತ್ತಿದ್ದಂತೆ ರೈತ ಶಿವಾಜಿ ಗುರವ ತಲೆಮರೆಸಿಕೊಂಡಿದ್ದಾರೆ. ಇನ್ನೊರ್ವ ರೈತ ಗಣಪತಿ ಗುರವನನ್ನು ವನ್ಯಜೀವಿ ಸುರಕ್ಷತಾ ಕಾಯ್ದೆಯಡಿಯಲ್ಲಿ ಬಂಧಿಸಲಾಗಿದೆ. ಈ ಪ್ರಕರಣ ಕುರಿತು ತನಿಖೆ ಆರಂಭಿಸಿದ್ದೇವೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ವರದಿಯನ್ನ ಕೇಳಿದ್ದಾರೆ ಎಂದು ತಿಳಿಸಿದ್ದಾರೆ.

## ಪತ್ನಿ, ಮಗಳು, ನಾದಿನಿಯ ಕೊಂದು ತಾನೂ ಆತ್ಮಹತ್ಯೆಗೆ ಶರಣಾದ ವ್ಯಕ್ತಿ

**ಹೈದರಾಬಾದ್**: ವ್ಯಕ್ತಿಯೊಬ್ಬ ಪತ್ನಿ, ಮಗಳು ಹಾಗೂ ನಾದಿನಿಯ ಕೊಲೆ ಮಾಡಿ ತಾನೂ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಹೈದರಾಬಾದಿನ ವಿಕಾರಾಬಾದ್‌ನಲ್ಲಿ ನಡೆದಿದೆ. ಕುಲ್ಕಚೆರ್ಲಾ ಮಂಡಲದಲ್ಲಿರುವ ಅವರ ಮನೆಯಲ್ಲಿ ಬೆಳಗಿನ ಜಾವ 2.30 ರಿಂದ 3 ಗಂಟೆಯ ನಡುವೆ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, ಆ ವ್ಯಕ್ತಿ ಕತ್ತಿ ಬಳಸಿ 30 ವರ್ಷದ ಪತ್ನಿ, ಸುಮಾರು 10 ವರ್ಷದ ಕಿರಿಯ ಮಗಳು ಮತ್ತು 40 ವರ್ಷದ ನಾದಿನಿಯನ್ನು ಮಲಗಿದ್ದಾಗ ಕೊಲೆ ಮಾಡಿದ್ದಾನೆ. ತುರ್ತು ಸಹಾಯವಾಣಿಯ ಮೂಲಕ ಪೊಲೀಸರಿಗೆ ಘಟನೆಯ ಬಗ್ಗೆ ಮಾಹಿತಿ ನೀಡಲಾಗಿತ್ತು ಮತ್ತು ಕರೆ ಬಂದ ಸ್ವಲ್ಪ ಸಮಯದ ನಂತರ ಸ್ಥಳಕ್ಕೆ ಬಂದಿದ್ದರು. ಆ ವ್ಯಕ್ತಿ ತನ್ನ ಹಿರಿಯ ಮಗಳನ್ನು ಸಹ ಕೊಲ್ಲಲು ಪ್ರಯತ್ನಿಸಿದ್ದ, ಆದರೆ ತಲೆಗೆ ಗಾಯಗಳಾಗಿದ್ದು ಅಪಾಯದಿಂದ ಪಾರಾಗಿದ್ದಾಳೆ. ಪ್ರಸ್ತುತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ನಂತರ ಆರೋಪಿ ಮನೆಯೊಳಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ದೃಢಪಡಿಸಿದ್ದಾರೆ.


ಪ್ರಾಥಮಿಕ ತನಿಖೆಯಲ್ಲಿ ಪತಿ ಮತ್ತು ಆತನ ಪತ್ನಿಯ ನಡುವಿನ ಕೌಟುಂಬಿಕ ಕಲಹಗಳು ದುರಂತಕ್ಕೆ ಕಾರಣವಾಗಿರಬಹುದು ಎಂದು ಅಂದಾಜಿಸಲಾಗಿದೆ. ಆಸ್ಪತ್ರೆಯಿಂದ ಪೊಲೀಸರೊಂದಿಗೆ ಮಾತನಾಡಿದ ಕುಟುಂಬದ ಮಗಳು, ರಾತ್ರಿಯ ಭಯಾನಕ ಘಟನೆಗಳನ್ನು ವಿವರಿಸಿದ್ದಾಳೆ. ಶನಿವಾರ ತನ್ನ ಹೆತ್ತವರ ನಡುವೆ ತೀವ್ರ ಜಗಳವಾಗಿದೆ. ನಂತರ ತಾಯಿ ಮನೆಯಿಂದ ಹೊರಟುಹೋದರು ಎಂದು ಆಕೆ ಹೇಳಿದ್ದಾಳೆ. ಅವರು ಮಲಗಿದ್ದಾಗ ಪರಿಸ್ಥಿತಿ ಹೇಗೆ ಮಾರಕವಾಯಿತು ಎಂದು ಅವರು ವಿವರಿಸಿದ್ದಾಳೆ.

ಕುಟುಂಬದವರು ಗಾಢ ನಿದ್ರೆಯಲ್ಲಿದ್ದಾಗ, ತನ ತಂದೆ ಮೊದಲು ನನ್ನ ಚಿಕ್ಕಮ್ಮನನ್ನು ಕತ್ತಿಯಿಂದ ಹೊಡೆದು ಕೊಂದಿದ್ದಾರೆ. ನನ್ನ ತಾಯಿ ಆಕೆಯನ್ನು ಉಳಿಸಲು ಪ್ರಯತ್ನಿಸಿದಾಗ, ಅವರು ಅವಳ ಮೇಲೂ ದಾಳಿ ಮಾಡಿದ್ದಾರೆ ಪರಿಣಾಮವಾಗಿ ಇಬ್ಬರೂ ಸಾವನ್ನಪ್ಪಿದ್ದಾರೆ.

ನಂತರ ತನ್ನ ತಂದೆ ನನ್ನ ಮೇಲೆ ಮತ್ತು ತನ್ನ ತಂಗಿಯ ಮೇಲೆ ಹಲ್ಲೆ ಮಾಡಿದ್ದರು. ದಾಳಿ ಮಾಡುವ ಮೊದಲು ಎಲ್ಲರೂ ಸತ್ತ ನಂತರ ನಿಮ್ಮನ್ನು ಯಾರು ನೋಡಿಕೊಳ್ಳುತ್ತಾರೆ ಎಂದು ತಂದೆ ಪ್ರಶ್ನಿಸಿದ್ದರು. ತಂಗಿಯ ಮೇಲೆ ಹಲ್ಲೆ ನಡೆಸಿ ನನ್ನ ಮೇಲೆ ಹಲ್ಲೆ ನಡೆಸಿದ ಬಳಿಕ ತಾನು ಓಡಿ ಹೋಗಿ ಅಕ್ಕಪಕ್ಕದ ಮನೆಯವರಿಗೆ ಮಾಹಿತಿ ನೀಡಿದೆ ಎಂದು ಆಕೆ ಮಾಹಿತಿ ನೀಡಿದ್ದಾಳೆ.

## ಮದುವೆಯಾಗು ಎಂದಿದ್ದಕ್ಕೆ ಪ್ರೇಯಸಿಯನ್ನು ಗುಂಡಿ ತೋಡಿ ಮುಚ್ಚೇಬಿಟ್ಟ





**ಚೆನ್ನೈ**: ಇದೆಂಥಾ ಪ್ರೀತಿ, ಎಷ್ಟೋ ಮಂದಿ ಮನೆಯಲ್ಲಿ ಇಬ್ಬರ ಮದುವೆ ಒಪ್ಪಿಕೊಳ್ಳಲಿಲ್ಲವೆಂದು ಪ್ರಾಣಬಿಡುವವರನ್ನು ಕೇಳಿದ್ದೇವೆ. ಆದರೆ ಇಷ್ಟ ಪಟ್ಟವರು ಮದುವೆಯಾಗು ಎಂದು ಕೇಳಿದ್ದಕ್ಕೆ ಕೊಲೆ(Murder) ಮಾಡಿರುವ ಹಲವು ನಿದರ್ಶನಗಳನ್ನು ಇತ್ತೀಚಿನ ದಿನಗಳಲ್ಲಿ ಕಾಣುತ್ತಿದ್ದೇವೆ. ಮದುವೆಯಾಗು ಎಂದಿದ್ದಕ್ಕೆ ಪ್ರಿಯಕರನೊಬ್ಬ ತನ್ನ ಪ್ರೇಯಸಿಯನ್ನು ಗುಂಡಿ ತೋಡಿ ಮುಚ್ಚಿರುವ ಘಟನೆ ತಮಿಳುನಾಡಿನ ಈರೋಡ್‌ನಲ್ಲಿ ನಡೆದಿದೆ.

ಈರೋಡ್ ಜಿಲ್ಲೆಯಲ್ಲಿರುವ ಬಾಳೆ ತೋಟವೊಂದರಲ್ಲಿ 35 ವರ್ಷದ ಮಹಿಳೆಯನ್ನು ಕೊಲೆ ಮಾಡಿ ಹೂತಿಟ್ಟಿರುವ ವಿಚಾರ ಇದೀಗ ಬೆಳಕಿಗೆ ಬಂದಿದೆ. ತನಿಖಾಧಿಕಾರಿಗಳು ಆಕೆಯೊಂದಿಗೆ ಸಂಬಂಧ ಹೊಂದಿದ್ದ 27 ವರ್ಷದ ವ್ಯಕ್ತಿಯನ್ನು ಬಂಧಿಸಿದ್ದಾರೆ.

ಇಬ್ಬರೂ ಸಂಬಂಧದಲ್ಲಿದ್ದಾರೆ ಮಳೆ ಬಂತೆಂದು ಅಣಬೆ ಸಂಗ್ರಹಿಸಲು ಹೊಲಕ್ಕೆ ಹೋದ ಸ್ಥಳೀಯರು ರಕ್ತಸಿಕ್ತ ಚಾಕು ಮತ್ತು ಮಣ್ಣಿನಲ್ಲಿ ಕೂದಲನ್ನು ಕಂಡು ಬೆಚ್ಚಿಬಿದ್ದಿದ್ದರು. ಗೋಬಿಚೆಟ್ಟಿಪಾಳಯಂ ಪಟ್ಟಣದ ಬಳಿಯ ಕೃಷಿಭೂಮಿಯಲ್ಲಿ ಮೂರು ಅಡಿ ಆಳದ ಗುಂಡಿಯಿಂದ ಪೊಲೀಸರು ಮಹಿಳೆಯ ಶವವನ್ನು ಹೊರತೆಗೆದಿದ್ದಾರೆ.

ಮೃತರನ್ನು ಅಪ್ಪಕುಡಲ್ ಪಟ್ಟಣದ ಬ್ಯೂಟಿಷಿಯನ್ ಸೋನಿಯಾ ಎಂದು ಗುರುತಿಸಲಾಗಿದೆ. ಅವರು ನವೆಂಬರ್ 1 ರಿಂದ ಕಾಣೆಯಾಗಿದ್ದರು. ಅವರು ಕೆಲಸದಿಂದ ಮನೆಗೆ ಬಾರದ ಕಾರಣ ಅವರ ಕುಟುಂಬವು ನಾಪತ್ತೆ ದೂರು ದಾಖಲಿಸಿದೆ. ವಿಧವೆಯಾಗಿರುವ ಸೋನಿಯಾ, ತನ್ನ ಮಗ, ಮಗಳು ಮತ್ತು ತಾಯಿಯೊಂದಿಗೆ ವಾಸಿಸುತ್ತಿದ್ದರು.

ತನಿಖೆಯಲ್ಲಿ ಆಕೆ ಬಿ.ಕಾಂ ಪದವೀಧರ ಮತ್ತು ಶವ ಪತ್ತೆಯಾದ ಬಾಳೆ ತೋಟದ ಮಾಲೀಕ ಮೋಹನ್ ಕುಮಾರ್ ಎಂಬ ಆರೋಪಿಯೊಂದಿಗೆ ಸಂಪರ್ಕ ಹೊಂದಿರುವ ಕರೆ ದಾಖಲೆಗಳು ಬಹಿರಂಗಗೊಂಡಿವೆ. ಪೊಲೀಸರು ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ ಆ ಮಹಿಳೆ ತನ್ನನ್ನು ಮದುವೆಯಾಗುವಂತೆ ಕೇಳುತ್ತಲೇ ಇದ್ದಳು, ಮತ್ತು ಇದು ಕೊಲೆಗೆ ಕಾರಣವಾಯಿತು ಎಂದು ಆತ ಬಾಯ್ಬಿಟ್ಟಿದ್ದಾನೆ. ಸೋನಿಯಾ ಮತ್ತು ಮೋಹನ್ ಕುಮಾರ್ ಎರಡು ವರ್ಷಗಳ ಹಿಂದೆ ಗೋಬಿಚೆಟ್ಟಿಪಾಳ್ಯಂ ಬಳಿಯ ಗಾರ್ಮೆಂಟ್ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದಾಗ ಮೊದಲು ಭೇಟಿಯಾದರು. ಕಾಲಾನಂತರದಲ್ಲಿ, ಅವರು ನಡುವೆ ಸಂಬಂಧ ಬೆಳೆದಿತ್ತು.

ಅಪರಾಧ ನಡೆದ ದಿನ ಮೋಹನ್ ಕುಮಾರ್ ತನ್ನ ಜಮೀನಿನಲ್ಲಿ ಗುಂಡಿ ತೋಡಿ ರಾತ್ರಿ 8 ಗಂಟೆ ಸುಮಾರಿಗೆ ಸೋನಿಯಾಳನ್ನು ಅಲ್ಲಿಗೆ ಕರೆಸಿಕೊಂಡಿದ್ದ . ಅವನು ಆಕೆಯ ಮೇಲೆ ಕಲ್ಲಿನಿಂದ ಹಲ್ಲೆ ನಡೆಸಿ, ಸಣ್ಣ ಚಾಕುವಿನಿಂದ ಕುತ್ತಿಗೆಗೆ ಇರಿದು ಕೊಂದು, ನಂತರ ಆಕೆಯ ಶವವನ್ನು ಹೂತು ಹಾಕಿ, ಆಕೆಯ ಫೋನ್ ಮತ್ತು ಬಟ್ಟೆಗಳನ್ನು ಭವಾನಿ ಕಾಲುವೆಯ ಬಳಿ ವಿಲೇವಾರಿ ಮಾಡಿದ್ದ. ಪೆರುಂಡುರೈ ಸರ್ಕಾರಿ ವೈದ್ಯಕೀಯ ಕಾಲೇಜಿನ ವೈದ್ಯಕೀಯ ತಂಡದೊಂದಿಗೆ ಸ್ಥಳದಲ್ಲೇ ಪರೀಕ್ಷೆ ಮತ್ತು ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ.

## ಹೆಜ್ಜೇನು ದಾಳಿ – 30ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗಾಯ!

ಮಡಿಕೇರಿ: ಹೆಜ್ಜೇನು ಕಡಿತಕ್ಕೊಳಗಾಗಿ 30ಕ್ಕೂ ಅಧಿಕ ವಿದ್ಯಾರ್ಥಿಗಳು ಗಾಯಗೊಂಡಿರುವ ಘಟನೆ ಕೊಡಗು ಜಿಲ್ಲೆಯ ವಿರಾಜಪೇಟೆ ನಗರದ ಸರ್ಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ನಡೆದಿದೆ.

ಎಂದಿನಂತೆ ವಿದ್ಯಾರ್ಥಿಗಳು ಶಾಲೆಗೆ ಬಂದು ಬೆಳಗ್ಗಿನ ಪ್ರೇಯರ್ ಮುಗಿಸಿ, ಬಿಸಿಹಾಲು ಪಡೆಯಲು ಸಾಲಿನಲ್ಲಿ ನಿಂತಿದ್ದರು. ಈ ವೇಳೆ ಸಮೀಪದ ತೋಟದಿಂದ ಹಾರಿಬಂದ ಹೆಜ್ಜೇನು ಹಿಂಡು ದಾಳಿ ನಡೆಸಿವೆ. ಮಕ್ಕಳು, ಶಾಲಾ ಶಿಕ್ಷಕರ ಮೇಲೆ ದಾಳಿಯಾಗಿದೆ. ಮಕ್ಕಳು ಚೀರಾಡುತ್ತಿದ್ದ ಶಬ್ಧ ಕೇಳಿಸುತ್ತಿದ್ದಂತೆ ಸ್ಥಳೀಯರು ನೆರವಿಗೆ ಧಾವಿಸಿದ್ದಾರೆ.

ಜೇನು ಓಡಿಸಿ ಮಕ್ಕಳನ್ನ ವಿರಾಜಪೇಟೆ ಆಸ್ಪತ್ರೆಗೆ ದಾಖಲಿಸಿದ್ದಾರೆ. ಮುಖ್ಯಶಿಕ್ಷಕಿ ಅನ್ನಮ್ಮ ಅವರೂ ಹೆಜ್ಜೇನು ದಾಳಿಗೆ ಒಳಗಾಗಿದ್ದು , ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮಕ್ಕಳಿಗೆ ಯಾವುದೇ ತೊಂದರೆಗಳಿಲ್ಲ ಎಂದು ವೈದ್ಯರು ತಿಳಿಸಿದ ಬಳಿಕ ನಿಟ್ಟುಸಿರು ಬಿಟ್ಟಿದ್ದಾರೆ.

ಘಟನೆ ಬಳಿಕ ವಿರಾಜಪೇಟೆ ನಗರಠಾಣೆಯ ಅಧಿಕಾರಿಗಳು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮಾಹಿತಿ ಪಡೆಯುತ್ತಿದ್ದಾರೆ

## ಬಸ್ಸಿನೊಳಕ್ಕೆ ಬಿದ್ದ ಜಲ್ಲಿ ರಾಶಿಯಲ್ಲಿ ಸಿಲುಕಿ 10ಕ್ಕೂ ಅಧಿಕ ಮಂದಿ ಸಾವು!



**ಹೈದರಾಬಾದ್**: ತೆಲಂಗಾಣದ ರಂಗಾರೆಡ್ಡಿ ಜಿಲ್ಲೆಯಲ್ಲಿ ದುರ್ಘಟನೆಯೊಂದು ಸಂಭವಿಸಿದೆ. ಇಂದು ಬೆಳಗ್ಗೆ ತೆಲಂಗಾಣ ಸರ್ಕಾರಿ ಬಸ್ ಮತ್ತು ಖಾಸಗಿ ಟಿಪ್ಪರ್ ನಡುವೆ ಅಪಘಾತ ಸಂಭವಿಸಿದ್ದು , ಮೃತಪಟ್ಟವರ ಸಂಖ್ಯೆ 24ಕ್ಕೆ ಏರಿಕೆಯಾಗಿದೆ.

ಸೋಷಿಯಲ್ ಮೀಡಿಯಾದಲ್ಲಿ ಘಟನೆಯ ವಿಡಿಯೋ ಹಾಗೂ ಫೋಟೋಗಳು ಹರಿದಾಡುತ್ತಿದ್ದು , ಚಿತ್ರಗಳೇ ಅಪಘಾತದ ತೀವ್ರತೆಯನ್ನು ಹೇಳುತ್ತಿವೆ. ಯೆಸ್. ಜಲ್ಲಿಕಲ್ಲು ತುಂಬಿಕೊಂಡು ಹೈದರಾಬಾದ್ ಕಡೆಯಿಂದ ಬಿಜಾಪುರ ಕಡೆಗೆ ಹೋಗುತ್ತಿದ್ದ ಲಾರಿಯೊಂದು ತಾಂಡೂರ್‌ನಿಂದ ಹೈದರಾಬಾದ್ ಕಡೆಗೆ ತೆರಳುತ್ತಿದ್ದ ತೆಲಂಗಾಣ ಸಾರಿಗೆ ಸಂಸ್ಥೆಯ ಬಸ್‌ಗೆ ಡಿಕ್ಕಿ ಹೊಡೆದಿದೆ.

ಪರಿಣಾಮ ಸ್ಥಳದಲ್ಲೇ 24 ಮಂದಿ ಸಾವನ್ನಪ್ಪಿದ್ದಾರೆ.

ತೆಲಂಗಾಣದ ಮಿರ್ಜಗೂಡ ಬಳಿ ಹೈದರಾಬಾದ್-ಬಿಜಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ದುರಂತ ಸಂಭವಿಸಿದೆ. ಘಟನೆಯಲ್ಲಿ ಸರ್ಕಾರಿ ಬಸ್ ಮತ್ತು ಟಿಪ್ಪರ್ ಲಾರಿ ಎರಡೂ ನಜ್ಜುಗುಜ್ಜಾಗಿದೆ. ಹೀಗಾಗಿ ಬಸ್ ಚಾಲಕ ಮತ್ತು ಟಿಪ್ಪರ್ ಚಾಲಕ ಇಬ್ಬರೂ ಅಸುನೀಗಿದ್ದಾರೆ. ಈ ದೃಶ್ಯಗಳೇ ಅಪಘಾತದ ತೀವ್ರತೆಯನ್ನ ಹೇಳುತ್ತಿವೆ.

**ಜಲ್ಲಿ ರಾಶಿ ಅಡಿಯಲ್ಲೇ ಹಲವರು ಸಮಾಧಿ**

ಬಸ್ ಮೇಲೆ ಜಲ್ಲಿಕಲ್ಲುಗಳು ಬಿದ್ದಿದ್ದರಿಂದ ಸಾವಿನ ಸಂಖ್ಯೆ ಹೆಚ್ಚಾಗಲು ಕಾರಣವಾಗಿದೆ. ಏಕಾಏಕಿ ಬಸ್‌ನಲ್ಲಿದ್ದ ಪ್ರಯಾಣಿಕರ ಮೇಲೆ ಬಿದ್ದ ಜಲ್ಲಿಕಲ್ಲುಗಳು ಮಧ್ಯೆ ಸಿಲುಕಿಯೇ ಸುಮಾರು 10ಕ್ಕೂ ಹೆಚ್ಚು ಪ್ರಯಾಣಿಕರು ಸಾವನ್ನಪ್ಪಿದ್ದಾರೆ. ಮೂರು ಜೆಸಿಬಿಗಳ ಸಹಾಯದಿಂದ ಜಲ್ಲಿಕಲ್ಲುಗಳ ರಾಶಿಯ ಅಡಿಯಲ್ಲಿ ಸಿಲುಕಿರುವ ಪ್ರಯಾಣಿಕರನ್ನ ಹೊರತೆಗೆಯಲಾಯಿತು. ಒಟ್ಟು ಮೃತರಲ್ಲಿ 10 ಮಂದಿ ಪುರುಷರು, 9 ಮಹಿಳೆಯರೂ ಕೂಡ ಸೇರಿದ್ದಾರೆ. ಅಪಘಾತ ನಡೆಯುವಾಗ ಬಸ್‌ನಲ್ಲಿ ಸುಮಾರು 70 ಪ್ರಯಾಣಿಕರಿದ್ದರು ಎಂದು ವರದಿಗಳು ತಿಳಿಸಿವೆ.



## ಪೇದೆ ವಿರುದ್ಧ ಅತ್ಯಾಚಾರ ಆರೋಪ ಕೇಸ್ ರದ್ದುಗೊಳಿಸಿದ ಹೈಕೋರ್ಟ್




**ಬೆಂಗಳೂರು**: ಮದುವೆಯಾಗುವುದಾಗಿ ಭರವಸೆ ನೀಡಿ ಅತ್ಯಾಚಾರ ನಡೆಸಿದ ಆರೋಪದಡಿ ಮಹದೇವಪುರ ಪೊಲೀಸ್ ಠಾಣೆಯ ಪೇದೆ ಫಕೀರಪ್ಪ ಹಟ್ಟಿ (30) ವಿರುದ್ಧ ದಾಖಲಾದ ಕೇಸ್ ಅನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿದೆ. ಮೂವರು ಮಕ್ಕಳ ತಾಯಿಯೊಬ್ಬರು ದಾಖಲಿಸಿದ್ದ ದೂರನ್ನು ತಿರಸ್ಕರಿಸಿದ್ದು , “ದೂರುದಾರೆಯ ವೈವಾಹಿಕ ಸ್ಥಿತಿಗತಿಯೇ ಮದುವೆ ಭರವಸೆಯ ಕಲ್ಪನೆಯನ್ನು ಅಸಂಭವಗೊಳಿಸುತ್ತದೆ” ಎಂದು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ ತೀರ್ಪು ನೀಡಿದೆ.

**ಪ್ರಕರಣದ ಹಿನ್ನೆಲೆ**: 2019ರ ಅಕ್ಟೋಬರ್‌ನಲ್ಲಿ ದೂರುದಾರೆ ಮನೆ ಮಾಲೀಕರೊಂದಿಗೆ ಭೋಗ್ಯ ಹಣ ವಾಪಸಾತಿ ವಿವಾದದಲ್ಲಿ ದೂರು ದಾಖಲಿಸಲು ಮಹದೇವಪುರ ಠಾಣೆಗೆ ತೆರಳಿದ್ದರು. ಆಗ ಠಾಣೆಯ ಪೇದೆ ಫಕೀರಪ್ಪ ಅವರ ಮೊಬೈಲ್ ಸಂಖ್ಯೆ ಪಡೆದು ಸಂಪರ್ಕ ಆರಂಭಿಸಿದ್ದರು. ಇಬ್ಬರ ನಡುವೆ ಸಂದೇಶ ವಿನಿಮಯದಿಂದ ಪ್ರೀತಿ ಬೆಳೆಯಿತು. ಆ ನಂತರ ದೈಹಿಕ ಸಂಬಂಧ ಏರ್ಪಟ್ಟು, ಸುಮಾರು ಎರಡೂವರೆ ವರ್ಷಗಳ ಕಾಲ ಮುಂದುವರಿದಿತ್ತು.

2022ರ ಅಕ್ಟೋಬರ್ 15ರಂದು ದೂರುದಾರೆ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿ, “ಫಕೀರಪ್ಪ ಮದುವೆಯಾಗುವುದಾಗಿ ಭರವಸೆ ನೀಡಿ ಲೈಂಗಿಕ ದೌರ್ಜನ್ಯ ನಡೆಸಿದ್ದಾರೆ” ಎಂದು ಆರೋಪಿಸಿದ್ದರು. ನ್ಯಾಯಾಲಯದ ಆದೇಶದ ಮೇರೆಗೆ ಪೊಲೀಸರು ತನಿಖೆ ನಡೆಸಿ, ಐಪಿಸಿ ಸೆಕ್ಷನ್ 376 (ಅತ್ಯಾಚಾರ), 323 (ಸ್ವಯಂಪ್ರೇರಿತ ನೋವು), 417 (ವಂಚನೆ), 506 (ಜೀವ ಬೆದರಿಕೆ) ಅಡಿ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಆದರೆ ಫಕೀರಪ್ಪ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿ, ದೋಷಾರೋಪ ಮತ್ತು ವಿಚಾರಣೆ ರದ್ದತಿಗೆ ಮನವಿ ಮಾಡಿದ್ದರು.

ದೂರುದಾರೆ 2012ರಲ್ಲಿ ಮದುವೆಯಾಗಿ ಮೂವರು ಮಕ್ಕಳಿದ್ದಾರೆ. ಪತಿಯೊಂದಿಗೆ ಅನ್ಯೋನ್ಯತೆ ಇಲ್ಲದಿದ್ದರೂ, ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ. ಆದರೆ ಮದುವೆ ಯಾಗದ ಸ್ಥಿತಿಯಲ್ಲಿಲ್ಲ. ಆದ್ದರಿಂದ “ಮದುವೆಯಾಗುತ್ತೇನೆ” ಎಂಬ ಭರವಸೆಯೇ ಅಸಂಭವ ಎಂದು ಹೇಳಿದೆ.

3 ವರ್ಷಗಳ ಕಾಲ ಇಬ್ಬರ ನಡುವೆ ಸಮ್ಮತಿಯ ಸಂಬಂಧ ಹೊಂದಿದ್ದರು. ಪ್ರತಿಯೊಂದು ಮುರಿದ ಭರವಸೆಯೂ ಸುಳ್ಳು ಭರವಸೆಯಲ್ಲ. ಪ್ರತಿಯೊಂದು ವಿಫಲ ಸಂಬಂಧವನ್ನೂ ಅತ್ಯಾಚಾರವೆಂದು ಪರಿಗಣಿಸಲಾಗುವುದಿಲ್ಲ,” ಎಂದು ಪೀಠ ಸ್ಪಷ್ಟಪಡಿಸಿದೆ. ತೀರ್ಪಿನಲ್ಲಿ ಹೈಕೋರ್ಟ್ ಸುಪ್ರೀಂ ಕೋರ್ಟ್ ನೀಡಿದ ಅನೇಕ ತೀರ್ಪುಗಳನ್ನು ಉಲ್ಲೇಖಿಸಿತು. “ಸಮ್ಮತಿಯ ಸಂಬಂಧ ಮತ್ತು ಅತ್ಯಾಚಾರ ನಡುವೆ ಸ್ಪಷ್ಟ ವ್ಯತ್ಯಾಸವಿದೆ. ಸಮ್ಮತಿಯಲ್ಲಿ ನಿರ್ಮಿತವಾದ ದೈಹಿಕ ಸಂಬಂಧವನ್ನು ನಂತರ ‘ಅತ್ಯಾಚಾರ’ ಎಂದು ಪರಿವರ್ತಿಸಲಾಗುವುದಿಲ್ಲ” ಎಂಬ ನಯೀಮ್ ಅಹ್ಮದ್ ಹಾಗೂ ಅಮೋಲ್ ಭಗವಾನ್ ನೇಹುಲ್ ಪ್ರಕರಣಗಳ ಉಲ್ಲೇಖ ಹೈಕೋರ್ಟ್ ನೀಡಿದೆ.

**ನ್ಯಾಯಾಲಯದ ಎಚ್ಚರಿಕೆ**: ಈ ತೀರ್ಪು ಕೇವಲ ಒಂದು ಪ್ರಕರಣಕ್ಕೆ ಸೀಮಿತವಲ್ಲ. ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ಗಳು ಹಲವು ಬಾರಿ ಅತ್ಯಾಚಾರ vs ಸಮ್ಮತಿ ಸಂಬಂಧ, ಸುಳ್ಳು ಭರವಸೆ vs ಭರವಸೆ ಉಲ್ಲಂಘನೆ ನಡುವಿನ ವ್ಯತ್ಯಾಸವನ್ನು ವಿವರಿಸಿವೆ. ವಿವಾಹದ ಭರವಸೆ ಉಲ್ಲಂಘನೆಯಾದರೂ, ಸಂಬಂಧ ಸಮ್ಮತಿಯದ್ದಿದ್ದರೆ ಅದು ಅತ್ಯಾಚಾರವಲ್ಲ ಎಂಬ ನಿಲುವು ಸ್ಪಷ್ಟವಾಗಿದೆ.

**ಹೈಕೋರ್ಟ್ ಎಚ್ಚರಿಕೆ ನೀಡಿದೆ**: ಈ ರೀತಿಯ ಕೇಸ್‌ಗಳನ್ನು ಮುಂದುವರಿಸಿದರೆ, ಅದು ಕಾನೂನು ಪ್ರಕ್ರಿಯೆಯ ದುರುಪಯೋಗವಾಗಲಿದೆ.” ಆದ್ದರಿಂದ ಫಕೀರಪ್ಪ ವಿರುದ್ಧದ ದೋಷಾರೋಪ ಪಟ್ಟಿ ಮತ್ತು 53ನೇ ACMM ನ್ಯಾಯಾಲಯದ ವಿಚಾರಣೆ ಸಂಪೂರ್ಣ ರದ್ದುಗೊಂಡಿದೆ.

## ವೇದಿಕೆ ಮೇಲೆ ಹಾಡುತ್ತಿದ್ದಾಗಲೇ ಹೃದಯಾಘಾತ: ಕುಸಿದು ಬಿದ್ದು ಎಎಸ್‌ಐ ಸಾವು




**ಉಡುಪಿ**: ಕರ್ನಾಟಕದ ಉಡುಪಿ ಜಿಲ್ಲೆಯಲ್ಲಿ ಹೃದಯಾಘಾತದಿಂದಾಗಿ ಮತ್ತೊಬ್ಬ ಪೊಲೀಸ್ ಸಿಬ್ಬಂದಿ ಸಾವನ್ನಪ್ಪಿದ ಘಟನೆ ನಡೆದಿದೆ. ಮಲ್ಪೆ ಪೊಲೀಸ್ ಠಾಣೆಯ ಸಹಾಯಕ ಉಪನಿರೀಕ್ಷಕ (ASI) ವಿಶ್ವನಾಥ್ (58) ಅವರು, ಸಹೋದ್ಯೋಗಿಯೊಬ್ಬರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಹಾಡು ಹಾಡುತ್ತಿದ್ದ ವೇಳೆಯೇ ಹಠಾತ್ತನೆ ಕುಸಿದು ಬಿದ್ದು ಮೃತಪಟ್ಟಿದ್ದಾರೆ.

**ಘಟನೆಯ ವಿವರ**: ಉಡುಪಿ ಜಿಲ್ಲೆಯಲ್ಲಿ ನಡೆದ ಪೊಲೀಸ್ ಸಿಬ್ಬಂದಿಯೊಬ್ಬರ ಬೀಳ್ಕೊಡುಗೆ ಸಮಾರಂಭದಲ್ಲಿ ವಿಶ್ವನಾಥ್ ಅವರು ವೇದಿಕೆಯ ಮೇಲೆ ನಿಂತು ಹಾಡುತ್ತಿದ್ದರು. ಕಾರ್ಯಕ್ರಮದಲ್ಲಿ ಸಹೋದ್ಯೋಗಿಗಳು, ಕುಟುಂಬಸ್ಥರು ಮತ್ತು ಸ್ನೇಹಿತರು ಸೇರಿ ಸಂತೋಷದಿಂದ ಆಚರಣೆ ನಡೆಸುತ್ತಿದ್ದರು. ಆದರೆ, ಹಾಡುವಾಗಲೇ ವಿಶ್ವನಾಥ್ ವೇದಿಕೆಯ ಮೇಲೆಯೇ ಕುಸಿದು ಬಿದ್ದರು. ತಕ್ಷಣವೇ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದರು.. ಹೃದಯಾಘಾತವೇ ಮೃತ್ಯುಕ್ಕೆ ಕಾರಣ ಎಂದು ವೈದ್ಯಕೀಯ ವರದಿ ತಿಳಿಸಿದೆ.

ವಿಶ್ವನಾಥ್ ಅವರು ಉಡುಪಿ ಜಿಲ್ಲಾ ಪೊಲೀಸ್ ಘಟಕದಲ್ಲಿ ಕಳೆದ 32 ವರ್ಷಗಳಿಂದ ಅಚ್ಚುಕಟ್ಟಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಮಲ್ಪೆ ಪೊಲೀಸ್ ಠಾಣೆಯಲ್ಲಿ ಕೆಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರು. ಸಹೋದ್ಯೋಗಿಗಳ ಪ್ರಕಾರ, ವಿಶ್ವನಾಥ್ ಅವರು ಯಾವಾಗಲೂ ಸಂತೋಷದಿಂದಿರುತ್ತಿದ್ದರು ಮತ್ತು ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು.

ಪೊಲೀಸ್ ಇಲಾಖೆಯ ಮೇಲಧಿಕಾರಿಗಳು ಈ ಘಟನೆಗೆ ತೀವ್ರ ಸಂತಾಪ ಸೂಚಿಸಿದ್ದಾರೆ. ಉಡುಪಿ ಎಸ್‌ಪಿ ಹಾಗೂ ಇತರ ಅಧಿಕಾರಿಗಳು ವಿಶ್ವನಾಥ್ ಅವರ ಕುಟುಂಬಕ್ಕೆ ಸಂತಾಪ ಸಂದೇಶ ಕಳುಹಿಸಿದ್ದಾರೆ. ಅವರ ಅಂತ್ಯಕ್ರಿಯೆಯಲ್ಲಿ ಪೊಲೀಸ್ ತಂಡದಿಂದ ಗೌರವ ಸಲ್ಲಿಸಲಾಗಿದೆ. ಮಲ್ಪೆ ಪೊಲೀಸ್ ಠಾಣೆಯಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದ್ದು , ಸಹೋದ್ಯೋಗಿಗಳು ಅವರ ನೆನಪುಗಳನ್ನು ಹಂಚಿಕೊಳ್ಳುತ್ತಿದ್ದಾರೆ.

## ವೈದ್ಯೆ ಹತ್ಯೆ ಕೇಸ್ - ಪ್ರೇಯಸಿ ಮೆಚ್ಚಿಸಲು ಪತ್ನಿಯ ಕೊಲೆ ಮಾಡಿದ್ದ ಹಂತಕ



**ಬೆಂಗಳೂರು** : ವೈದ್ಯೆ ಕೃತಿಕಾ ರೆಡ್ಡಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರೇಯಸಿಯನ್ನು ಮೆಚ್ಚಿಸಲು ಆರೋಪಿ ಮಹೇಂದ್ರ ರೆಡ್ಡಿ ಪತ್ನಿಯನ್ನು ಕೊಲೆ ಮಾಡಿದ್ದ ಎಂದು ತನಿಖೆ ವೇಳೆ ತಿಳಿದುಬಂದಿದೆ.

ಪೊಲೀಸರ ಮಾಹಿತಿ ಪ್ರಕಾರ, ಆರೋಪಿ ಮಹೇಂದ್ರ ರೆಡ್ಡಿ ತನ್ನ ಪ್ರೇಯಸಿಯನ್ನು ಮೆಚ್ಚಿಸಲು ಪತ್ನಿ ಕೃತಿಕಾ ರೆಡ್ಡಿ ಕೊಲೆ ಮಾಡಿದ್ದಾನೆ ಎಂಬ ಸ್ಫೋಟಕ ಮಾಹಿತಿಯನ್ನು ಬಯಲಿಗೆಳೆದಿದ್ದಾರೆ. ಆರೋಪಿ ಕೊಲೆ ಬಳಿಕ ತನ್ನ ಪ್ರೇಯಸಿಗೆ ಎಂದು ಮೆಸೇಜ್ ಮಾಡಿದ್ದ. ಪ್ರೇಯಸಿಯು ಮಹೇಂದ್ರ ರೆಡ್ಡಿಯ ವಾಟ್ಸಪ್ ಹಾಗೂ ಮೊಬೈಲ್ ನಂಬರ್‌ನ್ನು ಬ್ಲಾಕ್ ಮಾಡಿದ್ದಳು.

ಹೀಗಾಗಿ ಫೋನ್‌ಪೇನಲ್ಲಿ ಮೆಸೇಜ್ ಮಾಡಿದ್ದ ಎಂದು ತನಿಖೆ ವೇಳೆ ಬಾಯ್ಬಿಟ್ಟಿದ್ದಾನೆ. ಪ್ರೇಯಸಿ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಇಲ್ಲದಿದ್ದರೂ ಕೂಡ ಆರೋಪಿ ನಿರಂತರವಾಗಿ ಮೆಸೇಜ್ ಮಾಡಿರುವುದಾಗಿ ಪೊಲೀಸರ ಮುಂದೆ ಒಪ್ಪಿಕೊಂಡಿದ್ದಾನೆ.

**ಏನಿದು ಪ್ರಕರಣ**: ಪತಿ ಮಹೇಂದ್ರ ರೆಡ್ಡಿಯಿಂದ ಕೊಲೆಯಾದ ಪತ್ನಿ ಕೃತಿಕಾ ರೆಡ್ಡಿ ಅದೆಷ್ಟೋ ಕನಸು ಕಟ್ಟಿಕೊಂಡು ಮದುವೆಯಾಗಿದ್ದು. ತಾನು ವೈದ್ಯೆಯಾಗಿದ್ದು , ಜನರ ಜೀವ ಉಳಿಸುವ ದೇವತೆಯಾಗಿದ್ದು. ಕೃತಿಕಾ-ಮಹೇಂದ್ರರ ಮದುವೆ ಭಾರಿ ಅದ್ದೂರಿಯಾಗಿ ನಡೆದಿತ್ತು.

ಇನ್ನು, ಕೃತಿಕಾ ಆಗರ್ಭ ಶ್ರೀಮಂತೆಯಾಗಿದ್ದಳು. ಆಕೆಯ ತಂದೆ ಮುನಿರೆಡ್ಡಿ ನೂರಾರು ಕೋಟಿಯ ಒಡೆಯರಾಗಿದ್ದಾರೆ. ಮಗಳ ಮದುವೆಯನ್ನ ಅದ್ದೂರಿಯಾಗಿ ಮಾಡಿಸಿದ್ರು. 2024ರ ಮೇ 26ರಂದು ಹೊಸಜೀವನಕ್ಕೆ ಕಾಲಿಟ್ಟಿದ್ದರು. ಆದ್ರೆ, ಮದುವೆಯಾಗಿ ಕೆಲವೇ ತಿಂಗಳಲ್ಲಿ ವೈದ್ಯ ರಕ್ಕಸನಾಗಿ, ಕೃತಿಕಾಳನ್ನ ಕೊಂದಿದ್ದಾನೆ

## ದೇವಾಲಯದ ಗೇಟ್ ಬಿದ್ದು ಆಟವಾಡಿದ್ದ ಬಾಲಕನ ಕಾಲು ಮುರಿತ



**ನೆಲಮಂಗಲ**: ಆಂಜನೇಯ ಸ್ವಾಮಿ ದೇವಾಲಯದಲ್ಲಿ ಬಾಲಕ ಆಟವಾಡುವ ವೇಳೆ ದೇವಾಲಯದ ಗೇಟ್ ಬಿದ್ದು ಬಾಲಕನ ಕಾಲು ಮುರಿತವಾಗಿರುವ ಘಟನೆ ನಡೆದಿದೆ.

ಬೆಂಗಳೂರು ಹೊರವಲಯ ನೆಲಮಂಗಲ ಬಳಿಯ ಮಾಕಳಿಯ ಬೈಲಾಂಜನೇಯ ದೇವಾಲಯದಲ್ಲಿ ಘಟನೆ ನಡೆದಿದೆ. ಮುಜರಾಯಿ ಇಲಾಖೆಯ ಬೇಜವಬ್ದಾರಿತನಕ್ಕೆ ಲೋಹಿತ್ ನಾಯಕ್ ಎಂಬ 11 ವರ್ಷದ ಬಾಲಕನ ಕಾಲು ಮುರಿತವಾಗಿದೆ. ದೇವಸ್ಥಾನದ ಗೇಟ್ ತೊಡೆಯ ಮೇಲೆ ಬಿದ್ದು ತೊಡೆಭಾಗದ ಮೂಳೆ ಮುರಿತ ಮುಜರಾಯಿ ಇಲಾಖೆಯ ನಿರ್ಲಕ್ಷ್ಯಕ್ಕೆ ಕಾರಣವಾಗಿದೆ. ಕುಮಾರ್ ನಾಯಕ್ ಹಾಗೂ ಭಾರತಿ ಬಾಯಿ ದಂಪತಿಯ ಮಗನಾಗಿರುವ ಲೋಹಿತ್ ನಾಯಕ್ ಅರಸೀಕೆರೆ ಮೂಲದ ದಂಪತಿಗಳು 13 ವರ್ಷಗಳಿಂದ ಮಾಕಳಿಯಲ್ಲಿ ವಾಸವಾಗಿದ್ದರು.!

ಕ್ಯಾಬ್ ಚಾಲಕನಾಗಿರುವ ಬಾಲಕನ ತಂದೆ ನಿನ್ನೆ ನೆಲಮಂಗಲ ಬಳಿಯ ಮಾಕಳಿ ಬೈಲಾಂಜನೇಯ ಸ್ವಾಮಿ ದೇವಸ್ಥಾನಕ್ಕೆ ಮಗನನ್ನ ಕರೆದುಕೊಂಡು ಹೋಗಿದ್ದರು. ದೇಸ್ಥಾನದ ಬಳಿ ಆಟವಾಡಲು ಹೋಗಿದ್ದಾಗ ಘಟನೆ ನಡೆದಿದೆ. ಸದ್ಯ ಬಾಲಕ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ದೇವಸ್ಥಾನದ ಗೇಟ್ ತುಂಬಾ ಹಳೆಯದಾಗಿದ್ದರಿಂದ ಘಟನೆ ನಡೆದಿದೆ, ಇದು ಮುಜರಾಯಿ ಇಲಾಖೆಯ ನಿರ್ಲಕ್ಷ್ಯದಿಂದ ಆಗಿದೆ ಎಂದು ಜನ ಆಕ್ರೋಶ ಹೊರಹಾಕಿದ್ದಾರೆ.

## ‘ಆಕೆ’ ಗರ್ಭಿಣಿಯಾಗಲು ತಾನಲ್ಲ ಕಾರಣ ಎಂದು ನಾಲೆಗೆ ಹಾರಿ ಆತ್ಮಹತ್ಯೆಗೆ ಶರಣಾದ ಯುವಕ!

**ಮೈಸೂರು**: ಶಾಲಾ ವಿದ್ಯಾರ್ಥಿನಿಯನ್ನು ಗರ್ಭಿಣಿ ಮಾಡಿದ ಆರೋಪ ಎದುರಿಸುತ್ತಿದ್ದ ರಾಮು ಎಂಬ 27 ವರ್ಷ ವಯಸ್ಸಿನ ಯುವಕ ನಾಲೆಗೆ ಹಾರಿ ಆತ್ಮಹತ್ಯೆಗೆ ಶರಣಾದ ಘಟನೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ವ್ಯಾಪ್ತಿಯಲ್ಲಿ ನಡೆದಿದೆ. ಆದರೆ, ಸಾವಿಗೆ ಶರಣಾಗುವುದಕ್ಕೂ ಮುನ್ನ ವಾಯ್ಸ್ ನೋಟ್ ರೆಕಾರ್ಡ್ ಮಾಡಿಟ್ಟಿದ್ದು, ತನ್ನ ಮೇಲಿನ ಆರೋಪಗಳೆಲ್ಲ ಸುಳ್ಳು. ಎಲ್ಲದಕ್ಕೂ ಆ ಶಾಲೆಯ ಪಿಟಿ ಮಾಸ್ತರೇ ಕಾರಣ. ವಿದ್ಯಾರ್ಥಿನಿ ಗರ್ಭಿಣಿಯಾಗಿದ್ದು ಯಾರಿಂದ ಎಂಬುದನ್ನು ಡಿಎನ್ ಎ ಟೆಸ್ಟ್ ಮೂಲಕ ಪತ್ತೆಹಚ್ಚಬೇಕು ಎಂದು ಹೇಳಿಕೊಂಡಿದ್ದಾನೆ.


**ಯುವಕನ ವಾಯ್ಸ್ ನೋಟ್ ನಲ್ಲೇನಿದೆ**: ಆತ್ಮಹತ್ಯೆಗೂ ಮುನ್ನ ವಾಯ್ಸ್ ನೋಟ್ ಮಾಡಿಟ್ಟಿರುವ ಯುವಕ, ವಿದ್ಯಾರ್ಥಿನಿ ಗರ್ಭಿಣಿಯಾಗುವುದಕ್ಕೆ ನಾನು ಕಾರಣ ಅಲ್ಲ. ನನಗೂ ಆಕೆಗೂ ಯಾವುದೇ ಸಂಬಂಧ ಇಲ್ಲ. ನನ್ನ ಮೇಲೆ ಸುಳ್ಳು ಆರೋಪ ಮಾಡಲಾಗಿದೆ. ಇದರಿಂದಾಗಿ ನನಗೆ ತಲೆ ಎತ್ತಿ ನಡೆಯಲು ಸಾಧ್ಯವಾಗುತ್ತಿಲ್ಲ, ವೈದ್ಯರು ಬಂದು ಬಾಲಕಿಯ ಆರೋಗ್ಯ ತಪಾಸಣೆ ನಡೆಸಿದ್ದರು. ಆಗ ಬಾಲಕಿ ಗರ್ಭಿಣಿಯಾಗಿರುವುದು ಗೊತ್ತಾಗಿದೆ. ಶಾಲೆಗೆ ಕಳಂಕ ಬರುತ್ತದೆ ಎಂದು ಅಂತ ಪ್ರಕರಣ ಮುಚ್ಚಿ ಹಾಕುತ್ತಿದ್ದಾರೆ ಎಂದು ಆರೋಪಿಸಿದ್ದಾನೆ.

ಮುಂದುವರಿದು, ಹುಡುಗಿಯನ್ನು ಮಾತನಾಡಿಸಿದ್ದಕ್ಕೆ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ. ಶಾಲೆಯ ಪಿಟಿ ಟೀಚರ್ ಇದಕ್ಕೆಲ್ಲಾ ಕಾರಣ. ಅವರು ಹೀಗೆ ಮಾಡಿದ್ದಕ್ಕೆ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ. ಹೀಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ ಎಂದು ವಾಯ್ಸ್ ನೋಟ್‌ನಲ್ಲಿ ಯುವಕ ಹೇಳಿದ್ದಾನೆ. ಅಕ್ಟೋಬರ್ 31ರಂದು ವಾಯ್ಸ್ ನೋಟ್ ಹಾಕಿ ಯುವಕ ನಾಪತ್ತೆಯಾಗಿದ್ದ. ಇದೀಗ ಬೆಟ್ಟದ ತುಂಗಾ ನಾಲೆಯಲ್ಲಿ ಯುವಕನ ದೇಹ ಪತ್ತೆಯಾಗಿದೆ. ಬೆಟ್ಟದ ತುಂಗಾ ಗ್ರಾಮದ ನಾಲೆಯ ಬಳಿ ಬೈಕ್, ಚಪ್ಪಲಿ, ಮೊಬೈಲ್, ಜರ್ಕಿನ್ ಬಿಟ್ಟು ನಾಲೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದಾನೆ. ಅಲ್ಲದೆ, ಡಿಎನ್‌ಎ ಟೆಸ್ಟ್ ಮೂಲಕ ತಪ್ಪಿತಸ್ಥರ ಪತ್ತೆ ಹಚ್ಚಿ ಕ್ರಮ ಕೈಗೊಳ್ಳಿ ಎಂದು ವಾಯ್ಸ್ ನೋಟ್ ಮೂಲಕ ಒತ್ತಾಯಿಸಿದ್ದಾನೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ನಾಯಿಮರಿಯನ್ನು ಎತ್ತಿ ನೆಲಕ್ಕೆ ಬಡಿದು ಕೊಲೆ, ಮನೆ ಕೆಲಸದಾಕೆಯಿಂದಲೇ ರಾಕ್ಷಸೀ ಕೃತ್ಯ



**ಬೆಂಗಳೂರು:** ಮನೆಕೆಲಸದಾಕೆಯೊಬ್ಬಳು ಪುಟ್ಟ ಶ್ವಾನವೊಂದನ್ನು ಬಟ್ಟೆ ಒಗೆಯುವಂತೆ ಎತ್ತಿ ನೆಲಕ್ಕೆ ಬಡಿದು ಭೀಕರವಾಗಿ ಕೊಲೆ ಮಾಡಿದ ಘಟನೆ ಬೆಂಗಳೂರಿನ ಬಾಗಲೂರಿನ ಅಪಾರ್ಟ್‌ಮೆಂಟ್ ಒಂದರಲ್ಲಿ ನಡೆದಿದೆ. ಪುಟ್ಟ ನಾಯಿಮರಿಯನ್ನು ನೋಡಿಕೊಳ್ಳುವುದಕ್ಕೆಂದೇ ಕೆಲಸಕ್ಕಿದ್ದ ಮಹಿಳೆ ಅಮಾನವೀಯ ಕೃತ್ಯ ಎಸಗಿದ್ದು, ಆಕೆಯ ವಿರುದ್ಧ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.

ಎಂಬಿಎ ವಿದ್ಯಾರ್ಥಿನಿಯಾಗಿರುವ ರಾಶಿ ಪೂಜಾರಿ ಎಂಬವರು 4 ವರ್ಷದ ಹಿಂದೆ ಚಿಹೋವಾ ತಳಿಯ ಪುಟ್ಟ ಶ್ವಾನವನ್ನು ತಂದಿದ್ದು, ಸಾಕುತ್ತಿದ್ದಾರೆ. ಇದಕ್ಕೆ ಗೂಫಿ ಎಂದು ಹೆಸರಿಟ್ಟಿದ್ದಾರೆ. ರಾಶಿ ಪಾಲಿಗೆ ಈ ಗೂಫಿಯೇ ಮಗುವಾಗಿತ್ತು. ಪುಟ್ಟ ಪುಟ್ಟ ಹೆಜ್ಜೆ ಇಟ್ಟು ಈ ಗೂಫಿ ಮಾಡುತ್ತಿದ್ದ ತುಂಟತನ ನೋಡುತ್ತಲೇ ರಾಶಿ ಖುಷಿ ಖುಷಿಯಾಗಿದ್ದರು. ಕೇಕ್ ಕತ್ತರಿಸಿ ಹುಟ್ಟು ಹಬ್ಬವನ್ನೂ ಆಚರಿಸುತ್ತಿದ್ದರು. ಗೂಫಿ ಕೂಡ ಅವರ ಮನೆಯ ಒಬ್ಬ ಸದಸ್ಯನಾಗಿದ್ದ.

ಕಾಲೇಜಿಗೆ ಹೋದಾಗ, ಮನೆಯಲ್ಲಿ ಇಲ್ಲದೇ ಇರುವಾಗ ಗೂಫಿಯನ್ನು ನೋಡಿಕೊಳ್ಳಲೆಂದೇ ಪುಷ್ಪಲತಾ ಎಂಬಾಕೆಯನ್ನು ರಾಶಿ ಕೆಲಸಕ್ಕೆ ಇಟ್ಟುಕೊಂಡಿದ್ದರು. ಆದರೆ ಪುಷ್ಪಲತಾ ಇಂಥಾ ರಾಕ್ಷಸಿ ಎಂಬುದು ಗೊತ್ತಿರಲಿಲ್ಲ. ಅಕ್ಟೋಬರ್ 31 ರಂದು ನಾಯಿ ಮರಿ ಗೂಫಿಯನ್ನು ವಾಕಿಂಗ್‌ಗೆ ಕರೆದುಕೊಂಡು ಹೋಗುವಾಗ ಈ ಪುಷ್ಪಲತಾ, ನಾಯಿ ಮರಿಯನ್ನು ಕೊರಳಿಗೆ ಕಟ್ಟಿದ್ದ ಬೆಲ್ಟ್ ಹಿಡಿದು ಎತ್ತಿ ಫ್ಲೋರ್‌ಗೆ ಜೋರಾಗಿ ಬಡಿದಿದ್ದಾಳೆ. ಅಷ್ಟೇ, ಆ ನಾಯಿ ಅಲ್ಲೇ ಮೃತಪಟ್ಟಿದೆ.

ಪುಷ್ಪಲತಾಳ ಕ್ರೌರ್ಯದ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಆದರೆ, ಆಕೆ, ಮನೆಗೆ ಬಂದು ಕತೆ ಕಟ್ಟಿದ್ದಳು. ಲಿಫ್ಟ್‌ನಿಂದ ಬಿದ್ದು ಗೂಫಿ ಸತ್ತುಹೋಗಿದೆ ಎಂದು ಸುಳ್ಳು ಹೇಳಿದ್ದಳು. ಆದರೆ ಸಿಸಿಟಿವಿ ದೃಶ್ಯ ಪರಿಶೀಲಿಸಿದಾಗ ಪುಷ್ಪಲತಾಳ ಅಸಲಿಯತ್ತು ಬಯಲಾಗಿದೆ.

ಮಗುವಿನಂತೆ ಸಾಕಿದ್ದ ಗೂಫಿ ಈ ರೀತಿ ಕೊಲೆಯಾಗಿರುವುದನ್ನು ಕಂಡು ರಾಶಿ ಪೂಜಾರಿಗೆ ಬರಸಿಡಿಲೇ ಬಡಿದಂತಾಗಿದೆ. ಈ ಕುರಿತು ಇನ್‌ಸ್ಟಾಗ್ರಾಂನಲ್ಲಿ ಭಾವುಕ ಪೋಸ್ಟ್ ಹಂಚಿಕೊಂಡಿದ್ದಾರೆ.

ನಾಯಿ ಕೊಂದು ಮನೆಯಲ್ಲಿದ್ದ ಚಿನ್ನ ದೋಚಲು ಪ್ಲ್ಯಾನ್ ಮಾಡಿದ್ದ ಪುಷ್ಪಲತಾ! ಪುಷ್ಪಲತಾ ಕೇವಲ 45 ದಿನಗಳ ಹಿಂದಷ್ಟೇ ಮನೆ ಕೆಲಸಕ್ಕೆ ಸೇರಿದ್ದಳು ಎಂಬುದು ಗೊತ್ತಾಗಿದೆ. ನಾಯಿ ಕೊಲೆ ಮಾಡಿದ್ಯಾಕೆ ಎಂಬ ಬಗ್ಗೆ ಇನ್ನೂ ಬಾಯಿ ಬಿಡುತ್ತಿಲ್ಲ ಎನ್ನಲಾಗಗಿದೆ.

ಆಘಾತಕಾರಿ ವಿಚಾರ ಎಂದರೆ, ಈಕೆ ನಾಯಿ ಕೊಲೆ ಮಾಡುವುದರ ಜೊತೆಗೆ ರಾಶಿ ಅವರ ಮನೆಯಲ್ಲಿದ್ದ ಚಿನ್ನವನ್ನೂ ಕದ್ದು ಪರಾರಿಯಾಗಲು ಸಂಚುಹೂಡಿದ್ದಳು ಎನ್ನಲಾಗಿದೆ. ಸದ್ಯ ರಾಶಿ ನೀಡಿದ ದೂರಿನ ಅನ್ವಯ ಪುಷ್ಪಲತಾಳನ್ನು ಬಾಗಲೂರು ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದು, ವಿಚಾರಣೆ ನಡೆಸಿದ್ದಾರೆ.

## ಸಂಪುಟ ಪುನಾರಚನೆ ಫಿಕ್ಸ್ – ಇದಕ್ಕಾಗಿಯೇ ನ.15ಕ್ಕೆ ದೆಹಲಿಗೆ ಹೋಗ್ತೀನಿ C M



**ಬೆಂಗಳೂರು:** ಸಂಪುಟ ಪುನಾರಚನೆ ಬಗ್ಗೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರ ಜೊತೆ ಚರ್ಚೆ ಮಾಡುತ್ತೇನೆ. ಇದಕ್ಕಾಗಿಯೇ ನವಂಬರ್ 15ಕ್ಕೆ ದೆಹಲಿಗೆ ಹೋಗುತ್ತಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಮೈಸೂರಿನಲ್ಲಿ) ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಲಿ ಎಂಬ ಬಿಹಾರ ಮುಖಂಡರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಪ್ರಶ್ನೆ ಕೇಳ್ತಿದ್ದಂತೆ ಮಾಧ್ಯಮಗಳ ವಿರುದ್ಧ ಗರಂ. ಯಾರು ಏನೇ ಹೇಳಿದ್ರೂ ಅದು ಮುಖ್ಯವಲ್ಲ. ಕಾಂಗ್ರೆಸ್ ಹೈಕಮಾಂಡ್ ಹೇಳುವುದಷ್ಟೇ ಮುಖ್ಯ.

**ಕಾಂಗ್ರೆಸ್ ಹೈಕಮಾಂಡ್ ಏನಾದ್ರೂ ಹೇಳಿದ್ಯಾ ಈ ಬಗ್ಗೆ?**

ಯಾಕೆ ಪದೆ ಪದೆ ಅದನ್ನೇ ಮಾತನಾಡ್ತೀರಾ. ಜನ ಮಾತನಾಡುತ್ತಿಲ್ಲ, ಮಾಧ್ಯಮದವರೇ ಪದೇ ಪದೇ ಮಾತನಾಡುತ್ತಿದ್ದಾರೆ ಅಂತ ಗರಂ ಆದರು ಕಾಂಗ್ರೆಸ್‌ಗೆ ಹೈಕಮಾಂಡ್ ಇದೆ. ಹೈಕಮಾಂಡ್ ಹೇಳುವುದು ಮಾತ್ರವೇ ಮುಖ್ಯ, ಅದೇ ಅಂತಿಮ. ನಾನು ಬಿಹಾರ ಚುನಾವಣೆ ಬಳಿಕ ರಾಹುಲ್ ಗಾಂಧಿ ಅವರನ್ನ ಭೇಟಿ ಮಾಡುತ್ತೇನೆ. ಸಂಪುಟ ಪುನಾರಚನೆ ಬಗ್ಗೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರೊಟ್ಟಿಗೆ ಚರ್ಚೆ ಮಾಡುತ್ತೇನೆ. ಇದಕ್ಕಾಗಿಯೇ ನವಂಬರ್ 15ಕ್ಕೆ ದೆಹಲಿಗೆ ಹೋಗುತ್ತಿದ್ದೇನೆ. ಪುನಾರಚನೆ ಬಗ್ಗೆ ಹೈಕಮಾಂಡ್ ಏನು ಹೇಳುತ್ತೋ ಆ ರೀತಿ ನಡೆದುಕೊಳ್ಳುತ್ತೇನೆ ಎಂದು ಹೇಳಿದ್ದಾರೆ

ಸಿಎಂ. ನಿತೀಶ್ ಕುಮಾರ್‌ಗೆ ಸಿದ್ಧಾಂತ ಇಲ್ಲ ಇನ್ನೂ ಬಿಹಾರ ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿ, ಪ್ರಚಾರಕ್ಕೆ ಇಲ್ಲಿಯವರೆಗೆ ನನ್ನನ್ನ ಕರೆದಿಲ್ಲ, ಕರೆದರೆ ಹೋಗುತ್ತೇನೆ. ಬಿಹಾರದಲ್ಲಿ ಈ ಬಾರಿ ಇಂಡಿ ಒಕ್ಕೂಟ ಅಧಿಕಾರಕ್ಕೆ ಬರುತ್ತೆ. ನಿತೀಶ್ ಕುಮಾರ್ ಬಗ್ಗೆ ಜನಕ್ಕೆ ಬೇಸರ ಬಂದಿದೆ. ಏಕೆಂದ್ರೆ ಅವರಿಗೆ ಯಾವುದೇ ಸಿದ್ಧಾಂತ ಇಲ್ಲ. ಅವರು ಎಲ್ಲಾ ಪಕ್ಷಗಳನ್ನ ಬದಲಾಯಿಸಿದ್ದಾರೆ.

ಈ ಕಾರಣ ಜನ ಇಂಡಿ ಒಕ್ಕೂಟದ ಪರ ಮತ ಹಾಕುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ನಮ್ಮ ಗ್ಯಾರೆಂಟಿಗಳನ್ನೇ ನಿತೀಶ್ ಕುಮಾರ್ ಅಲ್ಲಿ ಘೋಷಣೆ ಮಾಡಿದ್ದಾರೆ. ಆದರು ಅಲ್ಲಿಯ ಜನ ಅವರನ್ನ ಕೈ ಹಿಡಿಯುವುದಿಲ್ಲ. ಕರ್ನಾಟಕದಲ್ಲಿ ಬಿಹಾರದ ಮತದಾರರು ಇದ್ದಾರೆ. ಅವರಿಗೂ ನಮ್ಮ ಒಕ್ಕೂಟಕ್ಕೆ ಮತ ಹಾಕಿ ಎಂದು ಕೇಳುತ್ತೇವೆ ಎಂದು ತಿಳಿಸಿದರು.

## ಗಣಿಗಾರಿಕೆಯಿಂದ ಭಾರತಕ್ಕೆ ತಗ್ಗುತ್ತೆ 100 ಬಿಲಿಯನ್ ಡಾಲರ್ ಹೊರೆ: ಸಿಎಸ್‌ಇಪಿ ವರದಿ

**ನವದೆಹಲಿ:** ನೆಲದಲ್ಲೇ ಲಭ್ಯ ಇರುವ ಹೇರಳ ಖನಿಜ ಸಂಪನ್ಮೂಲವನ್ನು ಉಪಯೋಗಿಸಿಕೊಂಡರೆ ಭಾರತ ಸಾಕಷ್ಟು ಹಣ ಉಳಿಸಲು ಸಾಧ್ಯ ಎಂದು ಸೆಂಟರ್ ಫಾರ್ ಸೋಷಿಯಲ್ ಅಂಡ್ ಎಕನಾಮಿಕ್ ಪ್ರೋಗ್ರೆಸ್ (ಸಿಎಸ್‌ಇಪಿ) ವರದಿಯಲ್ಲಿ ಹೇಳಲಾಗಿದೆ. ಭಾರತಕ್ಕೆ ಖನಿಜಗಳ ಅವಶ್ಯಕತೆ ಕುರಿತು ಸಿಎಸ್‌ಇಪಿ ತಯಾರಿಸುವ ವರದಿಯ ಪ್ರಕಾರ, ಖನಿಜ ಸಂಪನ್ಮೂಲಗಳನ್ನು ಹೆಚ್ಚುವರಿ ಮೈನಿಂಗ್ ಮೂಲಕ ಪಡೆದರೆ ಪ್ರತೀ ವರ್ಷ 100 ಬಿಲಿಯನ್ ಡಾಲರ್ (9 ಲಕ್ಷ ಕೋಟಿ ರೂ) ಅಮದು ವೆಚ್ಚವನ್ನು ತಪ್ಪಿಸಬಹುದು ಎಂದೆನ್ನಲಾಗಿದೆ.

ಭಾರತದಲ್ಲಿ ಸಮೃದ್ಧವಾಗಿರುವ ನೆಲ ಹೊಂದಿದೆ. ಇಲ್ಲಿ ಹೇರಳವಾದ ಮತ್ತು ವೈವಿಧ್ಯಮಯವಾದ ಖನಿಜಗಳ ಸಂಪನ್ಮೂಲ ಇದೆ. ಇಲ್ಲಿಯವರೆಗೆ ಶೇ. 30ರಷ್ಟನ್ನು ಮಾತ್ರ ಗುರುತಿಸಲಾಗಿದೆ. ಇತರ ಪ್ರಮುಖ ದೇಶಗಳಿಗೆ ಹೋಲಿಸಿದರೆ ಭಾರತವು ಹೆಚ್ಚಿನ ಗಣಿಗಾರಿಕೆ ನಡೆಸಿಲ್ಲ. ಭಾರತದ ಜಿಡಿಪಿಗೆ ಮೈನಿಂಗ್ ಸೆಕ್ಟರ್‌ನ ಕೊಡುಗೆ ಕೇವಲ 2 ಪ್ರತಿಶತ ಇದೆ. ಆಸ್ಟ್ರೇಲಿಯಾ, ಸೌತ್ ಆಫ್ರಿಕಾದಂತಹ ದೇಶಗಳಲ್ಲಿ ಅಲ್ಲಿಯ ಮೈನಿಂಗ್ ಸೆಕ್ಟರ್‌ಗಳು ಜಿಡಿಪಿಗೆ ಕೊಡುವ ಕೊಡುಗೆ ಶೇ. 7.5ರಿಂದ 12ರಷ್ಟಿದೆ ಎಂದು ಸಿಎಸ್‌ಇಪಿಯ ವರದಿಯಲ್ಲಿ ಹೇಳಲಾಗಿದೆ.

**ಭಾರತದಲ್ಲಿ ಗುರುತಿಸಲಾಗದ ಸಂಪನ್ಮೂಲಗಳು ಬಹಳಷ್ಟಿವೆಯಾ?**

ಭಾರತದ ನೆಲದೊಳಗೆ ವಿವಿಧ ಖನಿಜಗಳು, ಚಿನ್ನ, ತೈಲ ಇತ್ಯಾದಿ ಸಂಪನ್ಮೂಲಗಳು ಇವೆ. ಇವು ಎಲ್ಲೆಲ್ಲಿ ಲಭ್ಯ ಇವೆ ಎಂಬುದನ್ನು ನಿಖರವಾಗಿ ಪತ್ತೆ ಮಾಡಲು ಅನ್ವೇಷಣೆ ಅಗತ್ಯ. ಇದಕ್ಕೆ ಸಾಕಷ್ಟು ವೆಚ್ಚವಾಗುತ್ತದೆ. ಈ ಕಾರ್ಯ ಕೈಗೊಳ್ಳಲು ಖಾಸಗಿ ಕಂಪನಿಗಳು ಹಿಂದೇಟು ಹಾಕುತ್ತವೆ. ಸರ್ಕಾರದ ನೀತಿಯೇ ಇದಕ್ಕೆ ಕಾರಣ ಎಂಬುದನ್ನು ಸಿಇಎಸ್‌ಪಿ ವರದಿಯಲ್ಲಿ ಗುರುತಿಸಲಾಗಿದೆ.

**ಸರ್ಕಾರದ ನೀತಿಗಳು ಬದಲಾಗಬೇಕಾ?**

ಸಾಕಷ್ಟು ವೆಚ್ಚ ಮಾಡಿ ಸಂಪನ್ಮೂಲವನ್ನು ಪತ್ತೆ ಮಾಡಿದರೂ, ಆ ನಿಕ್ಷೇಪಗಳ ಮೇಲೆ ಕಂಪನಿಗೆ ಹಕ್ಕು ಇರುವುದಿಲ್ಲ. ಸರ್ಕಾರವು ಹರಾಜುಗಳ ಮೂಲಕ ಮೈನಿಂಗ್ ಲೀಸ್‌ಗಳನ್ನು ಹಂಚಿಕೆ ಮಾಡುತ್ತದೆ. ಇದರಿಂದಾಗಿ, ಸಂಪನ್ಮೂಲ ಅನ್ವೇಷಣೆಗೆ ಕಂಪನಿಗಳು ಹಿಂದೇಟು ಹಾಕುತ್ತವೆ ಎಂಬುದನ್ನು ಈ ವರದಿ ಒತ್ತಿ ಹೇಳುತ್ತಿದೆ. ಭಾರತದ ಆಮದಿನಲ್ಲಿ ಖನಿಜಗಳ ಪಾಲು ದೊಡ್ಡದು...

ಅಭಿವೃದ್ಧಿ ಹೊಂದುತ್ತಿರುವ ದೇಶವಾದ ಭಾರತಕ್ಕೆ ಸಾಕಷ್ಟು ಖನಿಜ ಮತ್ತು ಲೋಹಗಳ ಅವಶ್ಯಕತೆ ಇದೆ. 2022ರಲ್ಲಿ ಭಾರತವು ಈ ಖನಿಜ ಮತ್ತು ಲೋಹಗಳನ್ನು 157 ಬಿಲಿಯನ್ ಡಾಲರ್ ಮೌಲ್ಯದಷ್ಟು ಅಮದು ಮಾಡಿಕೊಂಡಿತ್ತು. ಆ ವರ್ಷ ಭಾರತದ ಒಟ್ಟು ಆಮದಿನಲ್ಲಿ ಇವುಗಳ ಪಾಲು ಶೇ. 20ಕ್ಕಿಂತಲೂ ಹೆಚ್ಚಿತ್ತು. ಅದರಲ್ಲೂ ಕ್ರಿಟಿಕಲ್ ಮಿನರಲ್ ಎನ್ನಲಾದ ಕಾಪರ್, ನಿಕಲ್, ಲಿಥಿಯಂ, ಕೊಬಾಲ್ಟ್ ಅನ್ನು ಭಾರತ ಹೆಚ್ಚಾಗಿ ಆಮದು ಮಾಡಿಕೊಳ್ಳುತ್ತದೆ.

## ಮಹಿಳೆಯ ಖಾಸಗಿ ಅಂಗಕ್ಕೆ ಪೊಲೀಸರಿಂದ ಹಲ್ಲೆ

**ಬೆಂಗಳೂರು,** : ಖಾಸಗಿ ಅಂಗಕ್ಕೆ ಹಲ್ಲೆ ಪರಿಣಾಮ ಮಲ, ಮೂತ್ರ ವಿಸರ್ಜಿಸಲು ಆಗದೆ ಮಹಿಳೆ ನರಕಯಾತನೆ ಅನುಭವಿಸುವಂತಾಗಿದ್ದು, ಬೆಂಗಳೂರಿನ ವರ್ತೂರು ಪೊಲೀಸರ ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. 34 ವರ್ಷದ ಸುಂದರಿ ಬಿಬಿ ಹಲ್ಲೆಗೊಳಗಾದ ಮಹಿಳೆ. ಬೌರಿಂಗ್ ಆಸ್ಪತ್ರೆಯ ಎಂಎಲ್‌ಸಿ ರಿಪೋರ್ಟ್‌ನಲ್ಲಿ ಗಾಯದ ಭೀಕರತೆ ಬಗ್ಗೆ ಉಲ್ಲೇಖಿಸಲಾಗಿದೆ. ಸದ್ಯ ವೈದ್ಯರ ಚಿಕಿತ್ಸೆ ನಂತರ ಮಹಿಳೆ ಚೇತರಿಸಿಕೊಳ್ಳುತ್ತಿದ್ದಾರೆ.

**ನಡೆದಿದ್ದೇನು?**

ಸುಂದರಿ ಬಿಬಿ ನಗರದ ಖಾಸಗಿ ಅಪಾರ್ಟ್‌ಮೆಂಟ್‌ನಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದರು. ಅವರು ಕೆಲಸ ಮಾಡುತ್ತಿದ್ದ ಫ್ಲ್ಯಾಟ್‌ನಲ್ಲಿ ಅವರ ವಿರುದ್ಧ ಕಳ್ಳತನ ಆರೋಪ ಕೇಳಿಬಂದಿತ್ತು. ಅಷ್ಟೇ ಅಲ್ಲದೆ ವರ್ತೂರು ಪೊಲೀಸರಿಗೆ ಮಹಿಳೆ ವಿರುದ್ಧ ದೂರು ಕೂಡ ನೀಡಲಾಗಿದೆ. ಹೀಗಾಗಿ ವಿಚಾರಣೆಗೆಂದು ಮಹಿಳೆ ಕರೆತಂದು ಪೊಲೀಸರು ಖಾಸಗಿ ಅಂಗ, ಕೈಕಾಲು ಮತ್ತು ತಲೆಗೆ ಮನಸೋಇಚ್ಛೆ ಹಲ್ಲೆ ಮಾಡಿರುವುದಾಗಿ ಆರೋಪ ಕೇಳಿಬಂದಿದೆ.

ಕಾರಟಗಿ ಪೊಲೀಸರು ಬೀದಿ ಬದಿ ವ್ಯಾಪಾರಿ ಮೇಲೆ ಕ್ರೌರ್ಯ

ಕೊಪ್ಪಳ ಜಿಲ್ಲೆಯ ಕಾರಟಗಿ ಪೊಲೀಸರು ಬೀದಿ ಬದಿ ವ್ಯಾಪಾರಿ ಮೇಲೆ ಕ್ರೌರ್ಯ ಮೆರೆದಿದ್ದ ಆರೋಪ ಇತ್ತೀಚೆಗೆ ಕೇಳಿಬಂದಿತ್ತು. ದುರ್ಗೇಶ್ ಮೂಲತಃ ಜಿಲ್ಲೆಯ ಯಲಬುರ್ಗಾ ತಾಲೂಕಿನ ಗುನ್ನಾಳ ನಿವಾಸಿ. ಇದೇ ದುರ್ಗೇಶ್ ಕಾರಟಗಿ ಪೊಲೀಸ್ ಠಾಣೆಯ ಸಿಬ್ಬಂದಿಗಳ ಮೇಲೆ ಗಂಭೀರ ಆರೋಪ ಮಾಡಿದ್ದರು. ಕುರಿ ಕಳ್ಳತನ ಕೇಸ್‌ನಲ್ಲಿ ದುರ್ಗೇಶ್‌ನನ್ನ ವಶಕ್ಕೆ ಪಡೆದು ಮನಸೋಇಚ್ಛೆ ಥಳಿಸಿದ್ದಾರೆಂಬ ಆರೋಪ ಕೇಳಿ ಬಂದಿತ್ತು.

ಕಾರಟಗಿ ಪೊಲೀಸ್ ಠಾಣೆಯ ಸಿಬ್ಬಂದಿ ಗಂಗಾಧರ, ಆನಂದ್ ಹಾಗೂ ಇನ್ನು ಕೆಲವರು ಸೇರಿ ಮೂರು ದಿನ ಕೂಡಿಟ್ಟು ಹಲ್ಲೆ ಮಾಡಿದ್ದಾರಂತೆ. ಅಲ್ಲದೆ ದುರ್ಗೇಶ್ ಬಳಿ ಸುಮಾರು 40 ಸಾವಿರ ರೂ. ಹಣ ವಸೂಲಿ ಮಾಡಿದ್ದರಂತೆ. ಎರಡು ತಿಂಗಳ ಬಳಿಕ ದುರ್ಗೇಶ್ ಪೊಲೀಸರ ಕ್ರೌರ್ಯವನ್ನ ಬಿಚ್ಚಿಟ್ಟಿದ್ದರು.

ಹಲ್ಲೆ ಮಾಡಿರುವ ವಿಷಯ ಯಾರಿಗೂ ಹೇಳದಂತೆ ಪೊಲೀಸರು ಧಮ್ಕಿ ಹಾಕಿದ್ದರಂತೆ. ಹೀಗಾಗಿ ಇಷ್ಟು ದಿನ ದುರ್ಗೇಶ್ ಸುಮ್ಮನಿದ್ದ. ಇದೀಗ ಪೊಲೀಸರ ವಿರುದ್ಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ಕೊಡಲು ನಿರ್ಧರಿಸಿದ್ದರು. ಅಲ್ಲದೆ ಪೊಲೀಸರ ಕಿರುಕುಳದಿಂದ ರೋಸಿಹೋಗಿದ್ದ ದುರ್ಗೇಶ್ ಆತ್ಮಹತ್ಯೆಗೂ ಮುಂದಾಗಿದ್ದರು ಎಂಬ ಶಾಕಿಂಗ್ ಮಾಹಿತಿಯನ್ನೂ ಅವರೇ ಬಾಯಿ ಬಿಟ್ಟಿದ್ದರು.

## ರಾಜ್ಯೋತ್ಸವದ ವೇಳೆ ಎಂಇಎಸ್ ಕರಾಳ ದಿನಾಚರಣೆ – 150 ಜನರ ವಿರುದ್ಧ FIR



**ಬೆಳಗಾವಿ:** ಕನ್ನಡ ರಾಜ್ಯೋತ್ಸವ ದಿನದಂದೇ ಬೆಳಗಾವಿಯಲ್ಲಿ ನಾಡದ್ರೋಹಿ ಎಂಇಎಸ್ ಕರಾಳ ದಿನಾಚರಣೆ ಮಾಡಿದ ಹಿನ್ನಲೆ, ಬೆಳಗಾವಿ ಮಾರ್ಕೆಟ್ ಪೊಲೀಸರು 150 ಜನರ ವಿರುದ್ಧ ಎಫ್‌ಐಆರ್ (FIR) ದಾಖಲಿಸಿದ್ದಾರೆ.

ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಮಹಾರಾಷ್ಟ್ರಕ್ಕೆ ಜೈಕಾರ ಹಾಕಿದ, ಭಾಷಾ ವಿಷಬೀಜ ಬಿತ್ತುವ ಕೆಲಸ, ದೊಂಬಿ ಎಬ್ಬಿಸುವ ಹುನ್ನಾರ ಆರೋಪಗಳ ಮೇಲೆ ಪಿಎಸ್‌ಐ ಹಾವಣ್ಣ ಅವರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಎಂಇಎಸ್ ಮಾಜಿ ಶಾಸಕ ಮನೋಹರ ಕಿನೇಕರ್, ಶುಭಂ ಶೆಳಕೆ ಸೇರಿದಂತೆ 150 ಜನರ ಮೇಲೆ ಪ್ರಕರಣ ದಾಖಲಿಸಿದ್ದಾರೆ. ಕೇಸ್ ದಾಖಲಾಗ್ತಿದ್ದಂತೆ ಆರೋಪಿಗಳು ಬೆಳಗಾವಿಯಿಂದ ಪಲಾಯನ ಮಾಡಿದ್ದಾರೆ. ಎಸ್ಕೇಪ್ ಆದ ಆರೋಪಿಗಳನ್ನ ಬಂಧಿಸಲು ಬೆಳಗಾವಿ ಮಾರ್ಕೆಟ್ ಪೊಲೀಸರು ಬಲೆ ಬೀಸಿದ್ದಾರೆ ಬೆಳಗಾವಿಯಲ್ಲಿ (Belagavi) ರಾಜಕೀಯ ಅಸ್ತಿತ್ವ ಕಳೆದುಕೊಂಡಿರುವ

ಎಂಇಎಸ್, ತನ್ನ ರಾಜಕೀಯ ಅಸ್ತಿತ್ವಕ್ಕಾಗಿ ಗಡಿಯಲ್ಲಿರುವ ಮರಾಠಿಗರನ್ನ ಕನ್ನಡಿಗರ ಮೇಲೆ ಎತ್ತಿ ಕಟ್ಟುವ ಕೆಲಸ ಮಾಡ್ತಿದೆ. ಅದೇ ನಿಟ್ಟಿನಲ್ಲಿ ಬೆಳಗಾವಿ ನಗರದ ಸರ್ದಾರ ಮೈದಾನದಲ್ಲಿ ರಾಜ್ಯೋತ್ಸವದ ವಿರುದ್ಧ ಕರಾಳ ದಿನದ ರ‍್ಯಾಲಿ ನಡೆಸಿತ್ತು. ಸರ್ದಾರ್ ಮೈದಾನದಿಂದ ವಿವಿಧ ಭಾಗಗಳಲ್ಲಿ ಸಂಚರಿಸಿ ಕಡಗೆ ಮರಾಠ ಮಂಡಳದಲ್ಲಿ ಸಮಾವೇಶ ಮಾಡಿ ಕರಾಳ ದಿನಾಚರಣೆ ನಡೆಸಿತು.

## ಟ್ರಾಫಿಕ್ ಪೊಲೀಸರಿಂದ ದಂಡ ತಪ್ಪಿಸಲು ಬಾಣಲೆಯನ್ನೇ ಹೆಲ್ಮೆಟ್ ಆಗಿ ಬಳಸಿದ ಸವಾರ



**ಬೆಂಗಳೂರು:** ಹೈಲ್ಮೆಟ್ ಧರಿಸದೆ, ಸೀಟ್ ಬೆಲ್ಟ್ ಧರಿಸದೆ ಹೀಗೆ ವಾಹನ ಚಲಾಯಿಸುವ ಸಂದರ್ಭದಲ್ಲಿ ಟ್ರಾಫಿಕ್ ರೂಲ್ಸ್‌ಗಳನ್ನು ಬ್ರೇಕ್ ಮಾಡಿದ್ರೆ, ಟ್ರಾಫಿಕ್ ಪೊಲೀಸರು ದಂಡ ವಿಧಿಸುತ್ತಾರೆ. ಆದ್ರೆ ದ್ವಿಚಕ್ರ ವಾಹನದಲ್ಲಿ ಕುಳಿತಿರುವ ಹಿಂಬದಿ ಸವಾರ ದಂಡ ತಪ್ಪಿಸಲು ಹೋಗಿ ಇದಕ್ಕೆ ಒಂದೊಳ್ಳೆ ಉಪಾಯ ಕಂಡುಕೊಂಡಿದ್ದಾನೆ. ಬೆಂಗಳೂರಿನಲ್ಲಿ ಬೈಕ್ ಹಿಂಬದಿ ಕುಳಿತಿರುವ ವ್ಯಕ್ತಿಯೊಬ್ಬ ತಲೆಯ ಮೇಲೆ ಬಾಣಲೆ ಹಿಡಿದುಕೊಂಡು ಕುಳಿತುಕೊಂಡಿರುವ ವಿಡಿಯೋ ಸದ್ಯ ವೈರಲ್ ಆಗಿದೆ. ಈ ವಿಡಿಯೋ ನೋಡಿದ ನೆಟ್ಟಿಗರು ಇದು ಬೇಜವಾಬ್ದಾರಿತನದ ಪರಮಾವಧಿ ಎಂದು ಟೀಕಿಸಿದ್ದಾರೆ.

ಹೆಸರಿನ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳಲಾದ ಈ ವಿಡಿಯೋದಲ್ಲಿ ರೂಪೇನ ಅಗ್ರಹಾರ ಬಳಿ ಟ್ರಾಫಿಕ ನಡುವೆ ಚಲಿಸುವಾಗ ಬೈಕ್‌ನ ಹಿಂಬದಿ ಸವಾರನು ತನ್ನ ತಲೆಯ ಮೇಲೆ ಬಾಣಲೆಯನ್ನು ಹಿಡಿದುಕೊಂಡು ಕುಳಿತಿರುವುದನ್ನು ಕಾಣಬಹುದು. ಈ ದೃಶ್ಯವನ್ನು ವಾಹನದಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರೊಬ್ಬರು ಚಿತ್ರೀಕರಿಸಿದ್ದಾರೆ. ನವೆಂಬರ್ 1 ರಂದು ಹಂಚಿಕೊಳ್ಳಲಾದ ಈ ವಿಡಿಯೋ ಇದುವರೆಗೆ ಮೂರು ಲಕ್ಷಕ್ಕೂ ಅಧಿಕ ವೀಕ್ಷಣೆಗಳನ್ನು ಪಡೆದುಕೊಂಡಿವೆ.

ಒಬ್ಬ ಬಳಕೆದಾರ ಬೆಂಗಳೂರಿನಲ್ಲಿ ಯಾರು ಹೆಲ್ಮೆಟ್ ಧರಿಸುವುದಿಲ್ಲ, ಟ್ರಾಫಿಕ್ ಪೊಲೀಸರಿಗೆ ಯಾರು ಹೆದರುತ್ತಾರೆ ಎಂದಿದ್ದಾರೆ. ಇನ್ನೊಬ್ಬರು, ಬೆಂಗಳೂರಿನಲ್ಲಿ ಮಾತ್ರ ಸಂಚಾರ ಎಷ್ಟು ಹುಚ್ಚುಚ್ಚಾಗಿತ್ತೆಂದರೆ ಪಾತ್ರೆಗಳು ರಕ್ಷಣಾತ್ಮಕ ಸಾಧನಗಳಾಗಿ ಬದಲಾಗುತ್ತವೆ. ಆ ವ್ಯಕ್ತಿ ನಿಜವಾಗಿಯೂ ಮೊದಲು ಸುರಕ್ಷತೆ, ನಂತರ ಉಪಹಾರ" ಎಂದು ಯೋಚಿಸಿದ್ದಾರೆ. ಆ ಚಲನ್ ಬರೆಯುವಾಗ ಪೊಲೀಸರು ನಗದಿರಲು ಪ್ರಯತ್ನಿಸುವುದನ್ನು ಊಹಿಸಿ, ಇದು ಕಡಿಮೆ ಬಜೆಟ್ ನಲ್ಲಿ ಭಾರತದಲ್ಲಿನ ಅತ್ಯುನ್ನತ ನಾವೀನ್ಯತೆಯಾಗಿದೆ ಎಂದು ಕಾಮೆಂಟ್ ಮಾಡಿದ್ದಾರೆ. ಮತ್ತೊಬ್ಬ ಬಳಕೆದಾರ ಈ ವ್ಯಕ್ತಿಯ ಹೆಂಡ್ತಿ ಅಡುಗೆ ಮನೆಯಲ್ಲಿ ಬಾಣಲೆಯನ್ನು ಹುಡುಕುತ್ತಿರಬಹುದು ಎಂದು ತಮಾಷೆ ಮಾಡಿದ್ದಾರೆ.

## ಅನಿಲ್ ಅಂಬಾನಿಗೆ ಇಡಿ ಬಿಗ್ ಶಾಕ್: 3 ಸಾವಿರ ಕೋಟಿ ರೂ. ಮೌಲ್ಯದ ಆಸ್ತಿ ಮುಟ್ಟುಗೋಲು



**ನವದೆಹಲಿ:** ಭಾರತದ ಖ್ಯಾತ ಉದ್ಯಮಿ ಹಾಗೂ ರಿಲಯನ್ಸ್ ಗ್ರೂಪ್ ಅಧ್ಯಕ್ಷ ಅನಿಲ್ ಅಂಬಾನಿಗೆ (ಇಡಿ) ಭಾರೀ ಆಘಾತ ನೀಡಿದೆ. ಹಣ ವರ್ಗಾವಣೆ ತಡೆ ಕಾಯ್ದೆ (PMLA) ಅಡಿಯಲ್ಲಿ ನಡೆಯುತ್ತಿರುವ ತನಿಖೆಯ ಹಿನ್ನೆಲೆಯಲ್ಲಿ, ಇಡಿ ಸುಮಾರು ₹3,000 ಕೋಟಿ ಮೌಲ್ಯದ ಆಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ.

ಅಧಿಕಾರಿಗಳ ಪ್ರಕಾರ, ಈ ಆಸ್ತಿಗಳು ಅನಿಲ್ ಅಂಬಾನಿ ನೇತೃತ್ವದ ರಿಲಯನ್ಸ್ ಕಮ್ಯುನಿಕೇಶನ್, ರಿಲಯನ್ಸ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಮತ್ತು ಸಂಬಂಧಿತ ಘಟಕಗಳ ಹೆಸರಲ್ಲಿ ಇವೆ. ಇವುಗಳಲ್ಲಿ ಮುಂಬೈ, ದೆಹಲಿ, ನೋಯ್ಡಾ, ಗೋವಾ, ಪುಣೆ, ಹೈದರಾಬಾದ್ ಮತ್ತು ಚೆನ್ನೈ ನಗರಗಳಲ್ಲಿರುವ ಫ್ಲಾಟ್‌ಗಳು, ಕಚೇರಿಗಳು ಮತ್ತು ಪ್ಲಾಟ್‌ಗಳು ಸೇರಿವೆ. ಮುಂಬೈನ ಬಾಂದ್ರಾದಲ್ಲಿರುವ ಅನಿಲ್ ಅಂಬಾನಿಯವರ ಪಾಳಿ ಹಿಲ್ ನಿವಾಸಕ್ಕೂ ಇಡಿ ಅಧಿಕಾರಿಗಳು ಭೇಟಿ ನೀಡಿದ್ದು, ಕೆಲವು ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಅಲ್ಲದೇ, ದೆಹಲಿಯ ಪ್ರಸಿದ್ಧ ಹೋಟೆಲ್ ರಂಜಿತ್ ಪ್ರದೇಶದಲ್ಲಿರುವ ರಿಲಯನ್ಸ್ ಸೆಂಟರ್ ಕಚೇರಿಯನ್ನೂ ಇಡಿ ಮುಟ್ಟುಗೋಲು ಹಾಕಿಕೊಂಡಿದೆ.

ಆ ಕಚೇರಿ ರಾಮಲೀಲಾ ಮೈದಾನ ಮತ್ತು ರಂಜಿತ್ ಸಿಂಗ್ ಫ್ಲೈಓವರ್ ನಡುವೆ ಇರುವ ಮಹಾರಾಜ ರಂಜಿತ್ ಸಿಂಗ್ ಮಾರ್ಗದಲ್ಲಿದೆ ಮತ್ತು ಸುಮಾರು ಮೂರು ಎಕರೆ ಪ್ರದೇಶದಲ್ಲಿ ಹರಡಿಕೊಂಡಿದೆ ಎಂದು ಮೂಲಗಳು ತಿಳಿಸಿವೆ. ಈ ಆಸ್ತಿ 20,000 ಕೋಟಿಗೂ ಹೆಚ್ಚು ಬ್ಯಾಂಕ್ ಹಣದ ದುರುಪಯೋಗ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸಂಸ್ಥೆಯು ಮುಟ್ಟುಗೋಲು ಹಾಕಿಕೊಂಡ ಪ್ರಮುಖ ಆಸ್ತಿಗಳಲ್ಲಿ ಒಂದಾಗಿದೆ.

ಇಡಿ ಕ್ರಮದ ಬಗ್ಗೆ ಪ್ರತಿಕ್ರಿಯೆ ಕೇಳಿದಾಗ, ಅನಿಲ್ ಅಂಬಾನಿಯವರ ರಿಲಯನ್ಸ್ ಗ್ರೂಪ್ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಈ ಹಿಂದೆ ಸಂಸ್ಥೆ ಯಾವುದೇ ರೀತಿಯ ಹಣಕಾಸು ಅಕ್ರಮದಲ್ಲಿ ತಾವು ಭಾಗಿಯಾಗಿಲ್ಲವೆಂದು ಸ್ಪಷ್ಟಪಡಿಸಿತ್ತು. "ನಾವು ಯಾವುದೇ ಕಾನೂನು ಉಲ್ಲಂಘನೆ ಮಾಡಿಲ್ಲ, ಮತ್ತು ತನಿಖಾ ಸಂಸ್ಥೆಗಳಿಗೆ ಪೂರ್ಣ ಸಹಕಾರ ನೀಡುತ್ತಿದ್ದೇವೆ," ಎಂದು ಹಿಂದಿನ ಹೇಳಿಕೆಯಲ್ಲಿ ರಿಲಯನ್ಸ್ ಗ್ರೂಪ್ ತಿಳಿಸಿತ್ತು. ಈ ಪ್ರಕರಣದಲ್ಲಿ ಇಡಿಗೆ ಈಗಾಗಲೇ ಹಲವು ಹಣಕಾಸು ದಾಖಲೆಗಳು, ಕಂಪನಿಗಳ ಬ್ಯಾಂಕ್ ಖಾತೆಗಳ ವಿವರಗಳು ಹಾಗೂ ವಿದೇಶಿ ಹೂಡಿಕೆಗಳ ಚಲನವಲನದ ಮಾಹಿತಿಗಳು ಸಿಕ್ಕಿವೆ ಎಂದು ತಿಳಿದುಬಂದಿದೆ. ಇಡಿ ಮುಂದಿನ ದಿನಗಳಲ್ಲಿ ಅನಿಲ್ ಅಂಬಾನಿ ಹಾಗೂ ರಿಲಯನ್ಸ್ ಗ್ರೂಪ್‌ನ ಉನ್ನತ ಅಧಿಕಾರಿಗಳನ್ನು ವಿಚಾರಣೆಗೆ ಕರೆಯುವ ಸಾಧ್ಯತೆ ಇದೆ.

ಹಣ ವರ್ಗಾವಣೆ ತಡೆ ಕಾಯ್ದೆ (PMLA) ಅಡಿಯಲ್ಲಿ ಇಡಿ ಮುಟ್ಟುಗೋಲು ಹಾಕಿಕೊಂಡಿರುವ ಈ ಆಸ್ತಿಗಳು ತಾತ್ಕಾಲಿಕವಾಗಿದ್ದು, ನ್ಯಾಯಾಲಯದ ಅನುಮೋದನೆಯ ನಂತರ ಶಾಶ್ವತ ಕ್ರಮ ಕೈಗೊಳ್ಳುವ ನಿರೀಕ್ಷೆ ಇದೆ.

## ಆಂಬುಲೆನ್ಸ್ ಚಾಲಕನ ನಿರ್ಲಕ್ಷ್ಯದಿಂದ ವಾಹನಾಪಘಾತ



ಬೆಂಗಳೂರು: ಜೀವ ಉಳಿಸಬೇಕಾದ ಆಂಬುಲೆನ್ಸ್ ಜೀವ ತೆಗೆದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನವೆಂಬರ್ 1 ರ ತಡರಾತ್ರಿ ಬೆಂಗಳೂರಿನ ರಿಚ್‌ಮಂಡ್ ವೃತ್ತದಲ್ಲಿ ಕ್ಲೌಡ್‌ನೈನ್ ಆಸ್ಪತ್ರೆಯಿಂದ ಬಂದ ಅತಿವೇಗದ ಆಂಬ್ಯುಲೆನ್ಸ್ ಮೂರು ಮೋಟಾರ್ ಸೈಕಲ್‌ಗೆ ಹೊಡೆದಿದೆ. ಸ್ಕೂಟರ್‌ನಲ್ಲಿದ್ದ ಗಂಡ ಹೆಂಡತಿಯಿಬ್ಬರೂ ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ಸೇರಿಸಲಾಗಿದೆ.

ಶನಿವಾರ ರಾತ್ರಿ 11:00 ಗಂಟೆ ಸುಮಾರಿಗೆ ನಗರದ ರಿಚ್ಮಂಡ್ ವೃತ್ತದ ಬಳಿ ಈ ಘಟನೆ ನಡೆದಿದ್ದು, ಆಂಬ್ಯುಲೆನ್ಸ್ ಮೂರು ಮೋಟಾರ್‌ಸೈಕಲ್‌ಗಳಿಗೆ ಡಿಕ್ಕಿ ಹೊಡೆದು ಅವುಗಳಲ್ಲಿ ಒಂದನ್ನು ಕೆಲವು ಮೀಟರ್‌ಗಳಷ್ಟು ಎಳೆದುಕೊಂಡು ಹೋಗಿದ್ದು, ಪೊಲೀಸ್ ಹೊರಠಾಣೆಯೊಂದಕ್ಕೆ ಡಿಕ್ಕಿ ಹೊಡೆದ ನಂತರ ನಿಂತಿತ್ತು. ಅತಿ ವೇಗದಿಂದ ಬಂದ ಆಂಬುಲೆನ್ಸ್ 3 ವಾಹನಗಳಲ್ಲಿದ್ದ ಮೊಹಮ್ಮದ್ ರಿಯಾಜ್ (22), ಮೊಹಮ್ಮದ್ ಸಿದ್ದಿಕ್ (25) ಮತ್ತು ಇಸ್ಮಾಯಿಲ್ ನಾಥನ್ ದಬಾಪು (40) ದಂಪತಿಗಳಿಗೆ ಗುದ್ದಿತ್ತು.

ಸ್ಥಳದಲ್ಲೇ ದಂಪತಿ ಸಾವು

ಘಟನೆಯಲ್ಲಿ ಡಿಯೋ ಸ್ಕೂಟರ್ನಲ್ಲಿದ್ದ ಇಸ್ಮಾಯಿಲ್ ನಾಥನ್ ದಬಾಪು ಮತ್ತು ಅವರ ಪತ್ನಿ ಸಮೀನ್ ಬಾನು (33)ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಮೊಹಮ್ಮದ್ ರಿಯಾಜ್ ಮತ್ತು ಮೊಹಮ್ಮದ್ ಸಿದ್ದಿಕ್ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತದ ನಂತರ ಓಡಿಹೋಗಿದ್ದ ಆಂಬುಲೆನ್ಸ್ ಚಾಲಕ ಅಶೋಕ್ ಕುಮಾರ್, ನಂತರ ಪೊಲೀಸರಲ್ಲಿ ಶರಣಾಗಿದ್ದು, ಪೊಲೀಸರು ಆತನ ಮೇಲೆ ಅತಿವೇಗ ಚಾಲನೆಯ ಆರೋಪ ಹೊರಿಸಿದ್ದಾರೆ. ಯಾವುದೇ ವೈದ್ಯಕೀಯ ತುರ್ತು ಪರಿಸ್ಥಿತಿಯಿಲ್ಲದಿದ್ದರೂ ಚಾಲಕ ನಿರ್ಲಕ್ಷ್ಯದಿಂದ ವಾಹನವನ್ನು ವೇಗವಾಗಿ ಚಲಾಯಿಸಿರುವುದು ಪೊಲೀಸರ ತನಿಖೆಯ ವೇಳೆ ದೃಢಪಟ್ಟಿದೆ.

## ಮದುವೆಗೆ ಹತ್ತು ವಿಚಿತ್ರ ಬೇಡಿಕೆಯಿಟ್ಟ ವರ ಈ ಲಿಸ್ಟ್ ನೋಡಿ ಹೆಣ್ಮಕ್ಕಳು ಶಾಕ್

ಮದುವೆ ಸೀಸನ್‌ಗಳು ಆರಂಭವಾಗಿದೆ. ಹೀಗಾಗಿ ತಮ್ಮ ಮಕ್ಕಳ ಮದ್ವೆಯನ್ನು ಅದ್ದೂರಿಯಿಂದ ಮಾಡ್ತಾರೆ. ಇದೆಲ್ಲರ ನಡುವೆ ಡಿಮ್ಯಾಂಡ್‌ಗಳ ಪಟ್ಟಿ ಮಾತ್ರ ಹೆಚ್ಚುತ್ತಲೇ ಹೋಗುತ್ತದೆ. ಇಲ್ಲೊಬ್ಬ ವರನು ಇದೇ ರೀತಿ ವಿಭಿನ್ನ ಹಾಗೂ ವಿಚಿತ್ರವಾಗಿ ಬೇಡಿಕೆಯಿಟ್ಟಿದ್ದಾನೆ. ಹೌದು, ವರದಕ್ಷಿಣೆಯನ್ನು (dowry) ನಿರಾಕರಿಸಿದ್ರೂ ಈತನದ್ದು ಒಂದಲ್ಲ ಎರಡಲ್ಲ ಹತ್ತು ಬೇಡಿಕೆಗಳು. ಈ ವರನ ಡಿಮ್ಯಾಂಡ್ ಆನ್ಲೈನ್‌ನಲ್ಲಿ ಬಿರುಗಾಳಿ ಎಬ್ಬಿಸಿದ್ದು, ಮದ್ವೆ ಆಗೋದು ಗ್ಯಾರಂಟಿನಾ ಎಂದು ಪ್ರಶ್ನೆ ಮಾಡಿದ್ದಾರೆ.

**ತನ್ನನ್ನು ಮದುವೆಯಾಗಬೇಕಂದ್ರೆ ಈ ಹತ್ತು ಬೇಡಿಕೆಗಳನ್ನು ಈಡೇರಿಸಲೇ ಬೇಕು ಎಂದಿದ್ದಾನೆ. ಈ ವರನ ಬೇಡಿಕೆಯ ಲಿಸ್ಟ್ ಹೀಗಿವೆ.**

**ವಿವಾಹ ಪೂರ್ವ ಫೋಟೋ ಶೂಟ್ ಹಾಗೂ ಪ್ರೀ ವೆಡ್ಡಿಂಗ್ ಫೋಟೋ ಶೂಟ್ ಇರಬಾರದು.**

**ವಧು ಲೆಹೆಂಗಾ ಅಲ್ಲ, ಸೀರೆಯನ್ನು ಉಡಬೇಕು,**

**ಮದುವೆಯ ಸಮಯದಲ್ಲಿ ಜೋರಾದ ಸಂಗೀತ ಇರಬಾರದು. ಮೃದುವಾದ ವಾದ್ಯ ಸಂಗೀತವನ್ನು ಮಾತ್ರ ನುಡಿಸಬೇಕು.**

**ಹೂವಿನ ಹಾರ ಬದಲಾವಣೆಯ ಸಮಯದಲ್ಲಿ ವಧುವರರು ಮಾತ್ರ ಇರಬೇಕು.**

**ಹಾರ ಬದಲಾವಣೆಯ ವೇಳೆ ವಧು ವರರನ್ನು ಮೇಲೆತ್ತುವಂತಿಲ್ಲ. ಒಂದು ವೇಳೆ ಇಂತಹ ಆಸೆ ಇರುವವರು ಈ ಸಮಾರಂಭದಿಂದ ಹೊರಗೆ ಹೋಗಬಹುದು.**

**ನವವಿವಾಹಿತರನ್ನು ಸಾರ್ವಜನಿಕವಾಗಿ ತಬ್ಬಿಕೊಳ್ಳಲು ಇಲ್ಲವಾದರೆ ಚುಂಬಿಸಲು ಕೇಳುವ ಯಾರನ್ನಾದರೂ ತಕ್ಷಣವೇ ಸ್ಥಳದಿಂದ ಕಳುಹಿಸಲಾಗುತ್ತದೆ. ಪುರೋಹಿತರು ವಿವಾಹ ವಿಧಿಗಳನ್ನು ಪ್ರಾರಂಭಿಸಿದ ನಂತರ ಅವರಿಗೆ ಯಾರೂ ಅಡ್ಡಿಪಡಿಸುವಂತಿಲ್ಲ.**

**ಛಾಯಾಗ್ರಾಹಕರು, ವಿಡಿಯೋಗ್ರಾಫರ್ ಫೋಟೋ ವೀಡಿಯೋಗಾಗಿ ಮದ್ವೆ ಆಚರಣೆಗಳನ್ನು ಅಡ್ಡಿಪಡಿಸುವಂತಿಲ್ಲ ಅಥವಾ ನಿಲ್ಲಿಸುವಂತಿಲ್ಲ, ದೂರವೇ ನಿಂತು ಫೋಟೋ ಅಥವಾ ವಿಡಿಯೋ ತೆಗಿಯಿರಿ. ಛಾಯಾಗ್ರಾಹಕರ ಮುಂದೆ ವಧು ವರರು ಕ್ಯಾಮೆರಾಗೆ ಅಸ್ವಾಭಾವಿಕವಾಗಿ ಪೋಸ್ ನೀಡುವುದಿಲ್ಲ.**

**ವಿವಾಹ ಸಮಾರಂಭ ಹಗಲಿನಲ್ಲಿ ನಡೆಯಬೇಕು ಹಾಗೂ ಸಂಜೆಯೊಳಗೆ ಪೂರ್ಣಗೊಳ್ಳಬೇಕು. ಅತಿಥಿಗಳಿಗೆ ಯಾವುದೇ ತೊಂದರೆಗೊಳಗಾಗುವುದಿಲ್ಲ. ಸಮಯಕ್ಕೆ ಸರಿಯಾಗಿ ಮನೆಗೆ ಮರಳಬಹುದು ಎಂದು ಉಲ್ಲೇಖಿಸಿದ್ದಾನೆ. ಈ ಪೋಸ್ಟ್ ವೈರಲ್ ಆಗುತ್ತಿದ್ದಂತೆ ಕೆಲವರು ಬೇಡಿಕೆಗಳ ಪಟ್ಟಿ ಸಮಂಜಸವಾಗಿದೆ ಎಂದು ಹೇಳಿದ್ದಾರೆ. ಒಬ್ಬ ಬಳಕೆದಾರ ಈ ರೀತಿ ಡಿಮ್ಯಾಂಡ್ ಇಟ್ಟರೆ ಮದ್ವೆಯಾದಂತೆ ಎಂದಿದ್ದಾರೆ.**

ಇನ್ನೊಬ್ಬರು ಈ ವ್ಯಕ್ತಿ ಸ್ನೇಹಿತರಿಲ್ಲದ ಮದುವೆಯಲ್ಲಿ ಮೋಜು ಮಾಡುವುದನ್ನು ಬಯಸದ ವ್ಯಕ್ತಿಯಂತೆ ಕಾಣುತ್ತಾನೆ ಎಂದು ಕಾಮೆಂಟ್ ಮಾಡಿದ್ದಾನೆ. ಮತ್ತೊಬ್ಬ ಬಳಕೆದಾರ ಈ ರೀತಿ ಬೇಡಿಕೆಯಿಟ್ಟರೆ ಇವನನ್ನು ಯಾರು ಮದ್ವೆ ಆಗ್ತಾರೆ ಎಂದು ಕೇಳಿದ್ದಾರೆ.

## ಭಾರತೀಯ ನೌಕಾಪಡೆಗೆ 'ಬಾಹುಬಲಿ' ರಾಕೆಟ್ ಯಶಸ್ವಿ



**ಆಂಧ್ರ:**ಭಾರತದ ಬಾಹ್ಯಾಕಾಶ ಕ್ಷೇತ್ರಕ್ಕೆ ಇಂದು ಒಂದು ಐತಿಹಾಸಿಕ ಮೈಲುಗಲ್ಲು ಸೇರಿತು. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO) ಭಾನುವಾರ ಸಂಜೆ 5:26 ಗಂಟೆಗೆ (IST) 'ಬಾಹುಬಲಿ' ಎಂದು ಕರೆಯಲ್ಪಡುವ CMS-03 ಸಂವಹನ ಉಪಗ್ರಹವನ್ನು ಯಶಸ್ವಿಯಾಗಿ ನಭಕ್ಕೆ ಹಾರಿಸಿದೆ. ಸ್ವದೇಶಿ LVM3-M5 ರಾಕೆಟ್‌ನಿಂದ ಜಿಯೋಸಿಂಕ್ರೋನಸ್ ಟ್ರಾನ್ಸ್‌ಫರ್ ಆರ್ಬಿಟ್ (GTO) ಗೆ ಉಡಾವಣೆಯಾದ ಈ 4,410 ಕೆಜಿ ತೂಕದ ಉಪಗ್ರಹವು ಭಾರತದಲ್ಲಿ ಭೂಮಿಯಿಂದ GTO ಗೆ ಹಾರಿಸಲಾದ ಅತ್ಯಂತ ಭಾರವಾದ ಉಪಗ್ರಹವಾಗಿದೆ. ಇದು ಭಾರತೀಯ ನೌಕಾಪಡೆಗೆ ಮುಂಚಿನ ತಂತ್ರಜ್ಞಾನದ ಶಕ್ತಿಯನ್ನು ನೀಡುತ್ತದೆ. ಶ್ರೀ ಇಸ್ರೋಯ ಪ್ರಕಾರ, ಇದು ಭಾರತದಲ್ಲಿ ಭೂಮಿಯಿಂದ GTO ಗೆ ಉಡಾವಣೆಯಾದ ಅತ್ಯಂತ ಭಾರವಾದ ಉಪಗ್ರಹವಾಗಿದ್ದು, ಸ್ವದೇಶಿ ತಂತ್ರಜ್ಞಾನದ ಮೈಲುಗಲ್ಲು. ಶನಿವಾರ ಪ್ರಾರಂಭವಾದ 24 ಗಂಟೆಗಳ ಕೌಂಟ್‌ಡೌನ್ ನಂತರ ಇಂದು ಸಂಜೆ ಯಶಸ್ವಿಯಾಗಿ ನಡೆದ ಈ ಉಡಾವಣೆಯು ಇಸ್ರೋದ ಹೆವಿ-ಲಿಫ್ಟ್ ರಾಕೆಟ್‌ಗಳ ವೆಚ್ಚ-ಪರಿಣಾಮಕಾರಿ ಸಾಮರ್ಥ್ಯವನ್ನು ತೋರಿದೆ.

**ಭಾರತೀಯ ನೌಕಾಪಡೆಗೆ 'ಬಾಹುಬಲಿ'ಯ ಶಕ್ತಿ: ಹಿಂದೂ ಮಹಾಸಾಗರದ ಮೇಲೆ ಕಣ್ಗಾವಲು**

GSAT-7R ಎಂದು ಕರೆಯಲ್ಪಡುವ CMS-03 ಉಪಗ್ರಹವು ಭಾರತೀಯ ನೌಕಾಪಡೆಗಾಗಿ ಅಭಿವೃದ್ಧಿಪಡಿಸಲಾದ ಅತ್ಯಂತ ಮುಂದುವರಿದ ಸಂವಹನ ಉಪಗ್ರಹವಾಗಿದೆ. ಸಂಪೂರ್ಣವಾಗಿ ಸ್ಥಳೀಯವಾಗಿ ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾದ ಇದು, ಭಾರತದ ಉನ್ನತ-ಮಟ್ಟದ ಉಪಗ್ರಹ ತಂತ್ರಜ್ಞಾನಗಳಲ್ಲಿ ಅತ್ಯುತ್ತವಾಗಿದೆ. ಕಾರ್ಯರೂಪಕ್ಕೆ ಬಂದ ನಂತರ, ಇದು ಹಿಂದೂ ಮಹಾಸಾಗರ ಪ್ರದೇಶ (IOR) ದಾದ್ಯಂತ ಸಮಗ್ರ ದೂರಸಂಪರ್ಕ ವ್ಯಾಪ್ತಿಯನ್ನು ಒದಗಿಸುತ್ತದೆ. ಈ ಉಪಗ್ರಹದ ಅತ್ಯಾಧುನಿಕ ಪೇಲೋಡ್‌ಗಳು ಹೆಚ್ಚಿನ ವೇಗದ ಧ್ವನಿ, ಡೇಟಾ ಮತ್ತು ವೀಡಿಯೊ ಸಂವಹನ ಲಿಂಕ್‌ಗಳನ್ನು ಬೆಂಬಲಿಸುವ ಬಹು-ಬ್ಯಾಂಡ್ ಟ್ರಾನ್ಸ್‌ಪಾಂಡರ್‌ಗಳನ್ನು ಒಳಗೊಂಡಿವೆ. ಇದರಿಂದ ನೌಕಾಪಡೆಯ ನೌಸೇನೆಗಳ ನಡುವೆ ರಿಯಲ್-ಟೈಮ್ ಸಂವಹನ ಸಾಧ್ಯವಾಗುತ್ತದೆ, ಮಿಲಿಟರಿ ಕಣ್ಗಾವಲು, ಸಮುದ್ರ ಸುರಕ್ಷತೆ ಮತ್ತು ರಕ್ಷಣಾ ಕಾರ್ಯಾಚರಣೆಗಳು ಸುಗಮವಾಗುತ್ತವೆ. ವರದಿಗಳ ಪ್ರಕಾರ, ಇದು ಮಹಾಸಾಗರದ ಮೇಲಿನ ಕಣ್ಗಾವಲುಗೆ ನಿರ್ಣಾಯಕವಾಗಿ ಕಾರ್ಯನಿರ್ವಹಿಸುತ್ತದೆ, ಆದರೆ ಇಸ್ರೋ ಇದರ ಮಿಲಿಟರಿ ಅನ್ವಯಿಕೆಗಳ ಬಗ್ಗೆ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

ಈ ಉಡಾವಣೆಯು ತಾಂತ್ರಿಕ ಮಟ್ಟದಲ್ಲಿ ಮಾತ್ರವಲ್ಲದೆ, ಭಾರತದ ಸ್ವಾವಲಂಬಿ ಬಾಹ್ಯಾಕಾಶ ಸಾಮರ್ಥ್ಯಗಳ ಪ್ರದರ್ಶನವಾಗಿಯೂ ಮಹತ್ವದ್ದು. ಭಾರತೀಯ ನೌಕಾಪಡೆಯ ಸಮುದ್ರ ಸುರಕ್ಷತೆಗೆ ಇದು ದೊಡ್ಡ ಉತ್ತೇಜನೆಯಾಗಿದ್ದು, ಇಸ್ರೋದ ಭವಿಷ್ಯದ ಮಿಷನ್‌ಗಳಿಗೆ ಮಾರ್ಗ ಸುಗಮಗೊಳಿಸುತ್ತದೆ. ಹರಿಕೋಟಾದ ಸತೀಶ್ ಧವನ್ ಸ್ಪೇಸ್ ಸೆಂಟರ್‌ನಿಂದ ನಡೆದ ಈ ಉಡಾವಣೆಯು ಇಸ್ರೋದ ಸ್ವಾವಲಂಬನೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

'ಬಾಹುಬಲಿ' ಎಂದರೇನು? ಇಸ್ರೋದ ರಾಕೆಟ್ ಸಾಮರ್ಥ್ಯದ ಪರೀಕ್ಷೆ

ಇಸ್ರೋದ ಈ ಉಡಾವಣೆಯು LVM3-M5 ರಾಕೆಟ್‌ನ ಭಾರ ಹೊರೆಯುವ ಸಾಮರ್ಥ್ಯವನ್ನು ಪರೀಕ್ಷಿಸುವ ಯೋಜನೆಯಾಗಿತ್ತು. 43.5 ಮೀಟರ್ ಎತ್ತರದ ಈ ಸ್ವದೇಶಿ ರಾಕೆಟ್‌ನಿಂದ CMS-03 ಉಪಗ್ರಹವನ್ನು GTO ಗೆ ಸ್ಥಾಪಿಸಲಾಯಿತು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.